ಸಂಪುಟ : 10 ಸಂಚಿಕೆ: 196 ಪುಟ : 4+2 ಬೆಲೆ: 3.00 ಶುಕ್ರವಾರ ಸೆಪ್ಟೆಂಬರ್ 12 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 196 Pages : 4+2 Price : 3.00 Friday September 12 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಿಕೇಂದ್ರಿಕರಣ ಯೋಜನೆ ಸಮಿತಿಗೆ ಡಿ.ಆರ್.ಪಾಟೀಲ ನೇಮಕ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಗ್ರಾಮ ಸ್ವರಾಜ ಮತ್ತು ಪಂಚಾಯತ ರಾಜ್ ಅಧಿನಿಯಮದಂತೆ ಗದಗ ಮತಕ್ಷೇತ್ರದ ಮಾಜಿ ಶಾಸಕರಾದ ಡಿ.ಆರ್.ಪಾಟೀಲರನ್ನು ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರನ್ನಾಗಿ ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಿ ಆದೇಶಿಸಲಾಗಿದೆ. ಡಿ.ಆರ್.ಪಾಟೀಲರ ಅಧಿಕಾರಾವಧಿ ಐದು ವರ್ಷ ಅಥವಾ ಮುಂದಿನ ಆದೇಶವರೆಗೆ ಇರಲಿದೆ ಎಂದು ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಇಲಾಖೆಯ ಪ್ರಕಟಣೆ ತಿಳಿಸಿದೆ.


## ಉಚಿತ ವಾಹನ ಚಾಲನಾ ತರಬೇತಿ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ SCP/TSP ಯೋಜನೆಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅರ್ಹ/ನಿರುದ್ಯೋಗಿ/ಯುವಕ/ಯುವತಿಯರಿಗೆ ಊಟ-ಉಪಹಾರ ಹಾಗೂ ವಸತಿ ಸಹಿತ 30 ದಿನಗಳವರೆಗೆ ಲಘು ಮತ್ತು ಭಾರಿ ವಾಹನ ಚಾಲನಾ ತರಬೇತಿಯನ್ನು ಪರವಾನಿಗೆ ಪತ್ರದ ವ್ಯವಸ್ಥೆಯೊಂದಿಗೆ ಉಚಿತವಾಗಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹೊಸದಾಗಿ ನಿರ್ಮಾಣಗೊಂಡಿರುವ ಶಿಗ್ಗಾಂವ ತರಬೇತಿ ಕೇಂದ್ರ, ಗಂಗಿಭಾವಿ ರಸ್ತೆ, ಶಿಗ್ಗಾಂವದಲ್ಲಿ ನೀಡಲಾಗುವುದು. ಆದ್ದರಿಂದ ಅರ್ಹ ಫಲಾನುಭವಿಗಳು ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ತರಬೇತಿ ಕೇಂದ್ರದ ದೂರವಾಣಿ ಸಂಖ್ಯೆ: 9663653500/ 9449925367 / 9449971416/7996864758ನ್ನು ಸಂಪರ್ಕಿಸಬಹುದಾಗಿದೆ ಎಂದು ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಡಾ. ಶಂಕರಗೌಡ ನಾಗನಗೌಡ ಪಾಟೀಲ ಪ್ರತಿಷ್ಠಾನದ ನೂತನ ಕಾರ್ಯಕಾರಿ ಮಂಡಳಿ ರಚನೆ





■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ರೋಣ ತಾಲೂಕಿನ ಮೇಗೂರು ಗ್ರಾಮದಲ್ಲಿ ನಡೆದ ಡಾ. ಶಂಕರಗೌಡ ನಾಗನಗೌಡ ಪಾಟೀಲ ಪ್ರತಿಷ್ಠಾನದ ವಾರ್ಷಿಕ ಸರ್ವ ಸಾಧಾರಣ ಸಭೆಯಲ್ಲಿ ಸರ್ವಾನುಮತದಿಂದ ನೂತನ ಕಾರ್ಯಕಾರಿ ಮಂಡಳಿಯನ್ನು ರಚಿಸಲಾಯಿತು.

ಅಧ್ಯಕ್ಷರಾಗಿ ಶಾಸಕ ಜಿ.ಎಸ್. ಪಾಟೀಲ, ಉಪಾಧ್ಯಕ್ಷರಾಗಿ ಐ.ಎಂ. ಕುಸಬಿ, ಪ್ರಧಾನ ಕಾರ್ಯದರ್ಶಿಗಳಾಗಿ ಎ.ಓ. ಪಾಟೀಲ, ನಿರ್ದೇಶಕರಾಗಿ ಸಿ.ಪಿ. ಪಾಟೀಲ, ಎ.ಎಂ. ಪಾಟೀಲ, ಎಸ್.ಬಿ. ಪಾಟೀಲ, ಎಸ್.ಎ. ಪಾಟೀಲ, ಜಯಶ್ರೀ ಎಸ್.ನಂದಿ, ಭಾರತಿ ಎ.ಪಾಟೀಲ, ವಾಯ್.ಆರ್. ಪಾಟೀಲ, ಪ್ರವೀಣ ದಂಗವಾಲ ಇವರುಗಳು ಆಯ್ಕೆಯಾಗಿದ್ದಾರೆ ಎಂದು ಪ್ರಧಾನ ಕಾರ್ಯದರ್ಶಿ ಎ.ಓ. ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ. ಗಂಗಾಧರ ಎಂ.ಸಿ

# ಅರಣ್ಯ ಸಂರಕ್ಷಕರು ನಾಡಿನ ಹಸಿರಿನ ಹರಿಕಾರರು

■ವಿಜಯಸಾಕ್ಷಿ ಸುದ್ದಿ, ಗದಗ

ನಾಡಿನ ಹಸಿರಿನ ನಿಜವಾದ ಹರಿಕಾರರು ಅರಣ್ಯ ಸಂರಕ್ಷಕರು. ನಾಡಿನ ಅರಣ್ಯ ಸಂಪತ್ತನ್ನು ರಕ್ಷಿಸಲು ಪ್ರಾಣತ್ಯಾಗ ಮಾಡಿದ ಅರಣ್ಯ ಇಲಾಖೆಯ ಹುತಾತ್ಮರ ತ್ಯಾಗ-ಬಲಿದಾನಗಳನ್ನು ನಾವೆಲ್ಲರೂ ನೆನೆಯುವ ಮೂಲಕ ಅರಣ್ಯ ಸಂರಕ್ಷಣೆಗೆ ಶ್ರಮಿಸಿದ ಸರ್ವರಿಗೂ ಆಭಾರಿಗಳಾಗಿರೋಣ ಎಂದು ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗಂಗಾದರ ಎಂ.ಸಿ ಹೇಳಿದರು.

ಗದುಗಿನ ಬಿಂಕದಕಟ್ಟಿಯಲ್ಲಿ ಗುರುವಾರ ಅರಣ್ಯ ಇಲಾಖೆಯಿಂದ ಸಾಲು ಮರದ ತಿಮ್ಮಕ್ಕ ಸಸ್ಯೋದ್ಯಾನದಲ್ಲಿ ಜರುಗಿದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಇಂದು ಹುತಾತ್ಮರನ್ನು ಕೇವಲ ಸ್ಮರಿಸುವ ದಿನವಲ್ಲ. ಜೊತೆಗೆ ನಾವೆಲ್ಲರೂ ಪರಿಸರ ಸಂರಕ್ಷಣೆಯ ಹೊಣೆ ಹೊರುವ ದಿನವಾಗಿದೆ.




ನಿರಂತರವಾಗಿ ನಡೆಯುವ ಅಕ್ರಮ ಪ್ರಾಣಿ ಬೇಟೆ ತಡೆಯಬೇಕು. ಪ್ರಕೃತಿಯಲ್ಲಿನ ಒಂದಿಲ್ಲೊಂದು ಲಾಭ ಪಡೆಯುವ ನಾವೆಲ್ಲರೂ ಪ್ರಕೃತಿ ಸಂರಕ್ಷಣೆ ಮಾಡುವ ಹೊಣೆಗಾರಿಕೆ ನಿರ್ವಹಿಸೋಣ ಎಂದರು.

ಕೋವಿಡ್ ಸಾಂಕ್ರಾಮಿಕದ ಸಂದರ್ಭದಲ್ಲಿಯೇ ನಮಗೆ ಶುದ್ಧ ಗಾಳಿಯ ಬೆಲೆಯ ಅರಿವಾಗಿದೆ.

ಪ್ರಕೃತಿಯಲ್ಲಿನ ಇಂತಹ ಶುದ್ಧ ಗಾಳಿ ನಮಗೆಲ್ಲ ಉಚಿತವಾಗಿ ದೊರೆಯುತ್ತದೆ. ಈ ಪ್ರಕೃತಿಯ ಋಣ ತೀರಿಸುವ ಕಾರ್ಯವನ್ನು ನಾವೆಲ್ಲರೂ ಮಾಡಬೇಕಿದೆ. ಪ್ರಕೃತಿ ನಮಗೆ ಉಚಿತವಾಗಿ ಆಹಾರ, ಶುದ್ಧ ಗಾಳಿಯನ್ನು ವಾತಾವರಣ ನೀಡುತ್ತಿದೆ. ಅದನ್ನು ಉಳಿಸಿ, ಬೆಳೆಸುವ ಮಹತ್ತರ ಕಾರ್ಯಕ್ಕೆ ನಾವೆಲ್ಲರೂ ಮುಂದಾಗೋಣ ಎಂದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ ಕೆಂಚಪ್ಪನವರ ಮಾತನಾಡಿ, ನಮ್ಮ ಉತ್ತಮ ಭವಿಷ್ಯಕ್ಕಾಗಿ ತಮ್ಮ ತ್ಯಾಗ, ಬಲಿದಾನದ ಮೂಲಕ ಅರಣ್ಯ ಸಂರಕ್ಷಣೆ ಮಾಡಿದವರನ್ನು ನೆನೆಯೋಣ. ಅರಣ್ಯ ಸಂಪತ್ತು ಕೇವಲ ಮರಗಳು, ಪ್ರಾಣಿಗಳಷ್ಟೇ ಅಲ್ಲ. ಅರಣ್ಯ ಇಲ್ಲದೇ ಮಳೆಯೂ ಇಲ್ಲ. ಜೀವವೂ ಇಲ್ಲ, ಜೀವನವೂ ಇಲ್ಲ ಎಂಬುದನ್ನು ನಾವೆಲ್ಲರೂ ಅರಿತು ಸಂರಕ್ಷಣೆ ಕಾರ್ಯದಲ್ಲಿ ನಮ್ಮದೇ ಆದ ಕೊಡುಗೆ ನೀಡೋಣ ಎಂದರು.

ಅರಣ್ಯ ಹುತಾತ್ಮರ ಸ್ಮಾರಕಕ್ಕೆ ಮುಖ್ಯ ಅತಿಥಿಗಳಿಂದ ಹಾಗೂ ವಿವಿಧ ರಂಗಗಳ ಪ್ರತಿನಿಧಿಗಳಿಂದ ಪುಷ್ಪ ನಮನ ಸಲ್ಲಿಸುವ ಮೂಲಕ ಗೌರವ ಸಮರ್ಪಣೆ, ಮೌನಾಚರಣೆ ಮಾಡಲಾಯಿತು.ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ ಸಜ್ಜನರ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಸಾಮಾಜಿಕ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಚಂದ್ರಹಾಸ ವೆರ್ಣೆಕರ್, ವಾರ್ತಾಧಿಕಾರಿ ವಸಂತ ಮಡ್ಲೂರ, ಅರಣ್ಯ ಇಲಾಖೆಯ ಅಧಿಕಾರಿಗಳಾದ ಪ್ರಕಾರ ಪವಾಡಿಗೌಡ್ರ, ಮೇಘನಾ ಎಚ್, ವೀರೇಂದ್ರ ಮರಿಸಬಣ್ಣವರ, ಮಂಜುನಾಥ ಮೇಗಳಮನಿ, ರಾಮಪ್ಪ ಪೂಜಾರ, ಸ್ನೇಹಾ ಕೊಪ್ಪಳ, ವೀರಭದ್ರಪ್ಪ ಕುಂಬಾರ ಅನ್ವರ ಕೊಲ್ಹಾರ ಸೇರಿದಂತೆ ಅರಣ್ಯ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

> ನಾವಿಂದು ಪರಿಸರ ಬದಲಾವಣೆಯಿಂದಾಗುವ ಅನಾಹುತಗಳನ್ನು ಎದುರಿಸುತ್ತಿದ್ದೇವೆ. ಪರಿಸರ ಸಂರಕ್ಷಣೆಯ ಕಾಳಜಿ ಹೊಣೆಗಾರಿಕೆಯನ್ನು ನಿಭಾಯಿಸುತ್ತಿಲ್ಲ. ಮನುಷ್ಯನನ್ನು ಬಿಟ್ಟು ಎಲ್ಲವನ್ನೂ ಸಹ ಪರಿಸರವೆಂದು ಪರಿಗಣಿತವಾಗುತ್ತದೆ. ಅಂತಹ ಪರಿಸರದ ಮೇಲೆ ಮಾನವನ ಅತಿಯಾದ ದುರಾಸೆಯಿಂದಾಗಿ ಹಾನಿ ಮಾಡುತ್ತಾ ಪ್ರಕೃತಿ ಅಸಮತೋಲನಕ್ಕೆ ಕಾರಣರಾಗಿದ್ದೇವೆ.
>
> **- ಸಿ.ಎನ್. ಶ್ರೀಧರ್.**
> ಜಿಲ್ಲಾಧಿಕಾರಿಗಳು, ಗದಗ.

ಅರಣ್ಯ ಸಂರಕ್ಷಣೆಯಲ್ಲಿ ಅನೇಕರ ತ್ಯಾಗ, ಬಲಿದಾನ ಸಮರ್ಪಣಾ ಮನೋಭಾವದಿಂದಾಗಿ ಇಂದು ಅರಣ್ಯಗಳು ಜೀವಂತವಾಗಿವೆ. ಅದಕ್ಕಾಗಿಯೇ ನಾವೆಲ್ಲರೂ ಜೀವಂತವಾಗಿದ್ದೇವೆ ಎಂಬುದನ್ನು ಮರೆಯಬಾರದು. ರಾಜ್ಯದಲ್ಲಿ 1966ರಿಂದ ಈವರೆಗೆ ಅರಣ್ಯ ಇಲಾಖೆಯಲ್ಲಿ ಕರ್ತವ್ಯ ನಿರತರಾಗಿದ್ದ 62 ನೌಕರರು ಹುತಾತ್ಮರಾಗಿದ್ದು, ಅವರೆಲ್ಲರ ಆತ್ಮಕ್ಕೆ ಚಿರಶಾಂತಿಯನ್ನು ನೀಡಲಿ. ಬಿಂಕದಕಟ್ಟಿಯಲ್ಲಿ ಅರಣ್ಯ ಹುತಾತ್ಮರ ಸ್ಮಾರಕ ನಿರ್ಮಾಣಕ್ಕೆ ಶ್ರಮಿಸಿದ ಎಲ್ಲರಿಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ ಕೆಂಚಪ್ಪನವರ ಧನ್ಯವಾದಗಳನ್ನು ತಿಳಿಸಿದರು.

### ಸೇನೆಯಲ್ಲಿ ಕರ್ತವ್ಯದಲ್ಲಿದ್ದಾಗಲೇ ವಿದ್ಯುತ್ ಅವಘಡದಿಂದ ಮೃತಪಟ್ಟ ಯೋಧ

# ಯೋಧ ಮಂಜುನಾಥಗೆ ಮಿಡಿದ ಕಂಬನಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸೇನೆಯಲ್ಲಿ ಕರ್ತವ್ಯದಲ್ಲಿದ್ದಾಗಲೇ ವಿದ್ಯುತ್ ಅವಘಡದಿಂದ ಮೃತಪಟ್ಟಿದ್ದ ತಾಲೂಕಿನ ಹಿರೇಕೊಪ್ಪ ಗ್ರಾಮದ ಯೋಧ ಮಂಜುನಾಥ ಮಲ್ಲಪ್ಪ ಗಿಡ್ಡಮಲ್ಲಣ್ಣವರ (35) ಅವರ ಅಂತ್ಯಸಂಸ್ಕಾರವನ್ನು ಗುರುವಾರ ಅವರ ಹುಟ್ಟೂರಿನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲಾಯಿತು.

ಯೋಧನ ಪಾರ್ಥಿವ ಶರೀರ ಹಿರೇಕೊಪ್ಪ ಗ್ರಾಮಕ್ಕೆ ಆಗಮಿಸುತ್ತಿದ್ದಂತೆ ಗ್ರಾಮಸ್ಥರು ಮತ್ತು ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಮಂಜುನಾಥ ಅವರು ಕಳೆದ 13 ವರ್ಷಗಳಿಂದ ಭಾರತೀಯ ಸೇನೆಯ ಪಂಜಾಬ್ ರಾಜ್ಯದ ಜಲಂಧರ್‌ನಲ್ಲಿರುವ



ಎಎಸ್‌ಸಿ ಸೆಂಟರ್‌ನಲ್ಲಿ ಯೋಧರಾಗಿ ಸೇವೆ ಸಲ್ಲಿಸುತ್ತಿದ್ದರು. ಅವರು ತಮ್ಮ ಕುಟುಂಬದೊಂದಿಗೆ ಸೇನಾ ವಸತಿ ಗೃಹದಲ್ಲಿ ವಾಸವಾಗಿದ್ದರು.

ಈಚೆಗೆ ಕರ್ತವ್ಯದ ಸಮಯದಲ್ಲಿ ಸಂಭವಿಸಿದ ವಿದ್ಯುತ್ ಅವಘಡದಿಂದ ಅವರು ಗಂಭೀರವಾಗಿ ಗಾಯಗೊಂಡಿದ್ದರು. ಕೂಡಲೇ ಅವರನ್ನು ಸೇನಾ ಆಸ್ಪತ್ರೆಗೆ ದಾಖಲಿಸಲಾಯಿತಾದರೂ, ಚಿಕಿತ್ಸೆ ಫಲಕಾರಿಯಾಗದೆ ಮಂಗಳವಾರ ಬೆಳಗ್ಗೆ ನಿಧನರಾಗಿದ್ದರು. ಗುರುವಾರ ಯೋಧನ ಪಾರ್ಥಿವ ಶರೀರವನ್ನು ವಿಶೇಷ ವಾಹನದಲ್ಲಿ ಹಿರೇಕೊಪ್ಪ ಗ್ರಾಮಕ್ಕೆ ತರಲಾಯಿತು. ಯೋಧನ ಅಂತಿಮ ದರ್ಶನಕ್ಕೆ ನೂರಾರು ಜನರು ಸೇರಿದ್ದರು. ನರಗುಂದ ಶಾಸಕ ಸಿ.ಸಿ. ಪಾಟೀಲ್, ಸಂಸದ ಪಿ.ಸಿ. ಗದ್ದಿಗೌಡರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೇರಿದಂತೆ ಹಲವು ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಯೋಧನಿಗೆ ಅಂತಿಮ ನಮನ ಸಲ್ಲಿಸಿ ಗೌರವ ಅರ್ಪಿಸಿದರು. ಯೋಧನ ಪತ್ನಿ ಮತ್ತು ಐದು ವರ್ಷದ ಪುತ್ರನ ನೋವು ಮನ ಕಲಕುವಂತಿತ್ತು. ಮೃತ ಯೋಧ ಮಂಜುನಾಥ ಅವರು ಪತ್ನಿ, ಪುತ್ರ, ತಂದೆ-ತಾಯಿ ಮತ್ತು ಸಹೋದರ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಯೋಧನ ಅಕಾಲಿಕ ನಿಧನಕ್ಕೆ ಇಡೀ ಗ್ರಾಮವೇ ಶೋಕದಲ್ಲಿ ಮುಳುಗಿತ್ತು.

ಯೋಧನ ಪಾರ್ಥಿವ ಶರೀರ ಹುಬ್ಬಳ್ಳಿ ಮೂಲಕ ಗದಗ ನಗರಕ್ಕೆ ಆಗಮಿಸುತ್ತಿದ್ದಂತೆ ಮಂಜುನಾಥ ಅವರ ಸ್ನೇಹಿತರು, ಅಭಿಮಾನಿಗಳು ಮತ್ತು ಗ್ರಾಮಸ್ಥರು ಬೈಕ್ ರ‍್ಯಾಲಿ ಮೂಲಕ ಹುಟ್ಟೂರು ಹಿರೇಕೊಪ್ಪಕ್ಕೆ ಕರೆದೊಯ್ದರು. ಮಂಜುನಾಥ ಅವರು ಶಿಕ್ಷಣ ಪಡೆದ ಬೆಟಗೇರಿಯ ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆಯ ಪದಾಧಿಕಾರಿಗಳೂ ಅಂತಿಮ ನಮನ ಸಲ್ಲಿಸಿದರು.

### ಇದೇ ಪ್ರಥಮ ಬಾರಿಗೆ ಐಪಿಎಲ್ ಮಾದರಿಯಲ್ಲಿ ಕ್ರಿಕೆಟ್ ಟೂರ್ನಿ

## ಹಾರ್ಡ್ ಟೆನ್ನಿಸ್ ಕ್ರಿಕೆಟ್ ಪಂದ್ಯಾವಳಿ ಸೆ.24ರಿಂದ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಪ್ರಥಮ ಬಾರಿಗೆ ಐಪಿಎಲ್ ಮಾದರಿಯಲ್ಲಿ ಹಾರ್ಡ್ ಟೆನ್ನಿಸ್ ಬಾಲ್ ಜಿಸಿಎಲ್ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಜಿಸಿಎಲ್ ಪ್ರಮುಖ ವಿಜಯ ಬಿ ಹೇಳಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಸೆ. 24ರಿಂದ 28ರವರೆಗೆ ನಗರದ ವಿಡಿಎಸ್‌ಟಿ ಮೈದಾನದಲ್ಲಿ ಪಂದ್ಯಾವಳಿ ನಡೆಯಲಿದೆ. ಈ ಟೂರ್ನಿಯಲ್ಲಿ ಒಟ್ಟು 8 ತಂಡಗಳು ಭಾಗವಹಿಸಲಿದ್ದು, ಒಟ್ಟಾರೆ 200 ಜನ ಆಟಗಾರರು ಹರಾಜಿನಲ್ಲಿ ಪಾಲ್ಗೊಂಡಿದ್ದಾರೆ. ಪ್ರತಿ ತಂಡದಲ್ಲಿ ಬೇರೆ ಜಿಲ್ಲೆಯ ಮೂವರು ಆಟಗಾರರನ್ನು ಸೇರಿಸಿಕೊಳ್ಳಲು ಅವಕಾಶ ನೀಡಲಾಗಿದೆ ಎಂದು ತಿಳಿಸಿದರು.

ಟೂರ್ನಿಯ ವಿಜೇತ ತಂಡಕ್ಕೆ 60 ಸಾವಿರ ರೂ. ನಗದು, ರನ್ನರ್ ಅಪ್ ತಂಡಕ್ಕೆ 30 ಸಾವಿರ, ಉತ್ತಮ ಬ್ಯಾಟ್ಸ್‌ಮನ್ ಮತ್ತು ಬೌಲರ್‌ಗೆ 5 ಸಾವಿರ ರೂ. ನಗದು ಹಾಗೂ ಸ್ಥಳೀಯ ಅತ್ಯುತ್ತಮ ಆಟಗಾರರಿಗೂ ನಗದು ಬಹುಮಾನ ನೀಡಲಾಗುವುದು ಎಂದು ತಿಳಿಸಿದರು.

ಗದಗ ಪರಿಸರದಲ್ಲಿ ಪ್ರತಿಭಾವಂತ ಕ್ರಿಕೆಟ್ ಆಟಗಾರರಿಗೆ ಅವಕಾಶ ಸಿಗಬೇಕು ಎನ್ನುವ ಉದ್ದೇಶದಿಂದ ಈ ಟೂರ್ನಿ ಆಯೋಜಿಸಲಾಗಿದೆ. ನೆರೆಯ ಜಿಲ್ಲೆಗಳಿಗೆ ಹೋಲಿಕೆ ಮಾಡಿದರೆ, ನಮ್ಮ ಜಿಲ್ಲೆಯಲ್ಲಿ ಅವಕಾಶಗಳು ಕಡಿಮೆ. ಹೀಗಾಗಿ ಜಿಲ್ಲೆಯ ಆಟಗಾರರಿಗೆ ವೇದಿಕೆ ಕಲ್ಪಿಸಲು ಈ ಟೂರ್ನಿ ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಸುದ್ದಿಗೋಷ್ಠಿಯಲ್ಲಿ ಅಸ್ಲಂ ಮುಧೋಳ, ಗಿರೀಶ ಹಡಪದ, ಶಿವರಾಜ ಕರಡಿ, ಸಿದ್ದು ಸಂಗನಾಳ ಮುಂತಾದವರು ಉಪಸ್ಥಿತರಿದ್ದರು.

### ಅಸಂಘಟಿತ ಕಾರ್ಮಿಕರ ಮಕ್ಕಳಿಗೆ ಶೀಘ್ರವೇ 37 ಕೋಟಿ ರೂ ವೆಚ್ಚದಲ್ಲಿ ವಸತಿ ನಿಲಯ

# ರೋಣ ನಗರದಲ್ಲಿ ಶೈಕ್ಷಣಿಕ ಕ್ರಾಂತಿ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಪಟ್ಟಣದಲ್ಲಿ ಶೈಕ್ಷಣಿಕ ಕ್ರಾಂತಿ ಆರಂಭಗೊಂಡಿದೆ. ಈ ಹಿನ್ನೆಲೆಯಲ್ಲಿ ಅಸಂಘಟಿತ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲಾಗಿದ್ದು, ಶೀಘ್ರದಲ್ಲಿಯೇ 37 ಕೋಟಿ ರೂ ವೆಚ್ಚದಲ್ಲಿ ವಸತಿ ನಿಲಯ ಕಟ್ಟಡಕ್ಕೆ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಪಟ್ಟಣದ ಮುದೇನಗುಡಿ ರಸ್ತೆಗೆ ಹೊಂದಿಕೊಂಡಿರುವ ಜನ್ನತ್ ನಗರದಲ್ಲಿ ಜರುಗಿದ ಹಜರತ್ ಮುಹಮ್ಮದ್ ಪೈಗಂಬರರ ಜನ್ಮ ದಿನಚಾರಣೆ ಮತ್ತು ಬಡ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ರೋಣ ತಾಲೂಕು ಸೇರಿದಂತೆ ಮತಕ್ಷೇತ್ರದಲ್ಲಿನ ಅಲ್ಪಸಂಖ್ಯಾತರ ಕಾಲೋನಿಗಳ ಹಾಗೂ ಶಾದಿಮಹಲ್ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ. ಜನ್ನತ್ ನಗರದ ಅಭಿವೃದ್ಧಿಗಾಗಿ 50 ಲಕ್ಷ ರೂ ಅನುದಾನ ಒದಗಿಸಲಾಗಿದ್ದು, ಪಟ್ಟಣದ ಎರಡು ಖಬರಸ್ಥಾನಗಳ ಅಭಿವೃದ್ಧಿಗೆ ತಲಾ 10 ಲಕ್ಷ ರೂಗಳನ್ನು ಒದಗಿಸಲಾಗಿದೆ. ಅಂಜುಮನ್ ಶಾಲೆಯ ಅಭಿವೃದ್ಧಿಗೂ 10 ಲಕ್ಷ ರೂಗಳನ್ನು ನಿಡಲಾಗಿದೆ ಎಂದರು.




ಸರಕಾರದ ಉದ್ದೇಶ ಅಲ್ಪಸಂಖ್ಯಾತರೆಲ್ಲರೂ ಆರ್ಥಿಕ, ಶೈಕ್ಷಣಿಕವಾಗಿ ಪ್ರಗತಿಯತ್ತ ಸಾಗಬೇಕು ಎನ್ನುವುದಾಗಿದೆ. ಈ ದೃಷ್ಟಿಯಿಂದ ರೋಣ ಪಟ್ಟಣದಲ್ಲಿ ಅಲ್ಪಸಂಖ್ಯಾತರ ಮಕ್ಕಳ ಶಿಕ್ಷಣಕ್ಕಾಗಿ ಮೂರು ವಸತಿ ನಿಲಯಗಳನ್ನು ತರಲಾಗಿದ್ದು, ಈಗಾಗಲೇ ಒಂದು ವಸತಿ ನಿಲಯ ಆರಂಭಗೊಂಡಿದೆ ಎಂದರು.

ಪಟ್ಟಣದ ಬದಾಮಿ ರಸ್ತೆಗೆ ಹೊಂದಿಕೊಂಡು 50 ಕೋಟಿ ರೂ ವೆಚ್ಚದಲ್ಲಿ ಜೆಟಿಟಿಸಿ ಮಹಾವಿದ್ಯಾಲಯ ಆರಂಭಗೊಂಡಿದೆ. ಮುಸ್ಲಿಂ ಸಮಾಜದ ವಿದ್ಯಾರ್ಥಿಗಳು ಇಲ್ಲಿ ಶಿಕ್ಷಣ ಪಡೆಯಬೇಕು. ಇಲ್ಲಿ ವೃತ್ತಿ ಕೌಶಲ್ಯ ಯೋಜನೆ ಕುರಿತು ತರಬೇತಿ ನೀಡಲಾಗುತ್ತದೆ. ಮುಖ್ಯವಾಗಿ ಉದ್ಯೋಗ ದೊರಕುತ್ತದೆ ಇದರಿಂದ ಕುಟುಂಬಗಳು ಆರ್ಥಿಕವಾಗಿ ಬೆಳೆಯುವಲ್ಲಿ ಸಹಕಾರಿಯಾಗಲಿದೆ ಎಂದರು. ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಮಾತನಾಡಿ, ಪೈಗಂಬರರ ತತ್ವಗಳನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕಿದೆ. ಅವರ ಆದರ್ಶ ನಮ್ಮ ಜೀವನದಲ್ಲಿ ಅಡಕವಾಗಬೇಕು. ಅವರು ಜಗತ್ತಿನ ಸರ್ವ ಜನಾಂಗಕ್ಕೂ ಸನ್ಮಾರ್ಗವನ್ನು ತೊರಿದ ಮಹಾನ್ ಪ್ರವಾದಿಗಳು. ಹೀಗಾಗಿ ಮುಸ್ಲಿಂ ಬಾಂಧವರು ಪ್ರವಾದಿಗಳು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಬೇಕು ಎಂದರು. ಡಾ. ವಿಶ್ವನಾಥ ಶ್ರೀಗಳು ಸಾನ್ನಿಧ್ಯ ವಹಿಸಿದ್ದರು. ಅಧ್ಯಕ್ಷತೆಯನ್ನು ಎ.ಎಸ್. ಖತೀಬ ವಹಿಸಿದ್ದರು.

ಪುರಸಭೆ ಉಪಾಧ್ಯಕ್ಷ ಹನ್ಮಂತಪ್ಪ ತಳ್ಳಿಕೇರಿ, ಪುರಸಭೆ ಸದಸ್ಯೆ ರಂಗವ್ವ ಭಜಂತ್ರಿ, ಕೆ.ಆಯ್. ಶೇಖ, ಯೂಸುಫ್ ನವಲಗುಂದ, ಶಫೀಕ ಮೂಗನೂರ, ಯೂಸುಫ್ ಇಟಗಿ, ಖಾದಿರಸಾಬ ಸಂಕನೂರ, ವಿ.ಬಿ. ಸೋಮನಕಟ್ಟಿಮಠ, ಶಾಹಿದ್ ಇಟಗಿ, ಕಾಶೀಮಸಾಬ ಸಂಕನೂರ, ಅಸ್ಲಂ ಕೊಪ್ಪಳ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> ರೋಣ, ಗಜೇಂದ್ರಗಡ ತಾಲೂಕಿನಲ್ಲಿ ನಿರ್ಮಾಣವಾಗುತ್ತಿರುವ ಅಲ್ಪಸಂಖ್ಯಾತರ ಸಮುದಾಯ ಭವನ ಹಾಗೂ ಶಾದಿಮಹಲ್ ನಿರ್ಮಾಣಕ್ಕೆ 1 ಕೋಟಿ 50 ಲಕ್ಷ ರೂ ಅನುದಾನವನ್ನು ಬಿಡುಗಡೆ ಮಾಡಿದ್ದು, ರೋಣ, ಗಜೇಂದ್ರಗಡ, ನರೇಗಲ್ಲ, ಮಾರನಬಸರಿ ಗ್ರಾಮಗಳಲ್ಲಿ ನಿರ್ಮಾಣವಾಗುತ್ತಿರುವ ಶಾದಿಮಹಲ್ ನಿರ್ಮಾಣಕ್ಕೆ ಮತ್ತಷ್ಟು ನೆರವು ಒದಗಿಸಲಾಗಿದೆ.
>
> **- ಜಿ.ಎಸ್. ಪಾಟೀಲ.**
> ಶಾಸಕರು.

## ಸಂಪಾದಕೀಯ

# ಕನ್ನಡದ ರತ್ನಗಳಿಗೆ ಅರ್ಹ ಗೌರವ

ಕರ್ನಾಟಕದ ಹೆಮ್ಮೆಯ ನಟ ದಿ. ಡಾ. ವಿಷ್ಣುವರ್ಧನ್ ಮತ್ತು ಹಿರಿಯ ನಟಿ ದಿ. ಬಿ. ಸರೋಜಾದೇವಿಯವರಿಗೆ ಮರಣೋತ್ತರವಾಗಿ ರಾಜ್ಯದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ 'ಕರ್ನಾಟಕ ರತ್ನ' ನೀಡಿ ಗೌರವಿಸಲು ರಾಜ್ಯ ಸರ್ಕಾರ ನಿರ್ಧರಿಸಿರುವುದು ಉತ್ತಮ ಬೆಳವಣಿಗೆ.

ಇದು ಕನ್ನಡ ಚಲನಚಿತ್ರರಂಗಕ್ಕೆ ಮತ್ತು ಕನ್ನಡ ಸಂಸ್ಕೃತಿಗೆ ಅವರಿಬ್ಬರು ಸಲ್ಲಿಸಿದ ಅಮೂಲ್ಯ ಕೊಡುಗೆಗೆ ಸಂದ ನಿಜವಾದ ಗೌರವ.

ವಿಷ್ಣುವರ್ಧನ್ ಅವರು 'ಸಾಹಸಸಿಂಹ' ಎಂದೇ ಖ್ಯಾತಿ ಪಡೆದವರು. ಅವರ ಅಭಿನಯದ ವೈಶಿಷ್ಟ್ಯ, ಶೈಲಿ ಮತ್ತು ಸರಳತೆ ಲಕ್ಷಾಂತರ ಕನ್ನಡಿಗರ ಹೃದಯ ಗೆದ್ದಿದೆ.

ಸರೋಜಾದೇವಿ ಅವರು 'ಅಭಿನಯ ಸರಸ್ವತಿ' ಎಂದು ಹೆಸರು ಗಳಿಸಿ, ಕೇವಲ ಕನ್ನಡ ಮಾತ್ರವಲ್ಲದೆ ಭಾರತೀಯ ಚಿತ್ರರಂಗದಲ್ಲೂ ತಮ್ಮ ಛಾಪನ್ನು ಮೂಡಿಸಿದ್ದಾರೆ. ಇಂತಹ ಕಲಾವಿದರಿಗೆ ಈ ಗೌರವ ಸಲ್ಲಿಸುವ ಮೂಲಕ ರಾಜ್ಯ ಸರ್ಕಾರ ಕಲಾಲೋಕದ ಸಾಧಕರಿಗೆ ಬೆಂಬಲ ನೀಡಿದೆ.

ಇದರ ಜೊತೆಗೆ, 'ವಿಶ್ವಮಾನವ' ಕುವೆಂಪು ಅವರಿಗೆ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ 'ಭಾರತ ರತ್ನ' ನೀಡುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ಕುವೆಂಪು ಅವರು ಕನ್ನಡ ಸಾಹಿತ್ಯ, ಸಂಸ್ಕೃತಿ ಮತ್ತು ಚಿಂತನೆಗೆ ನೀಡಿದ ಕೊಡುಗೆ ಅಪಾರ. ಅವರ ವಿಚಾರಗಳು, ಬರವಣಿಗೆ ಮತ್ತು 'ವಿಶ್ವಮಾನವ ಸಂದೇಶ' ಇಂದಿಗೂ ಪ್ರಸ್ತುತ. ಅವರನ್ನು 'ಭಾರತ ರತ್ನ' ಪ್ರಶಸ್ತಿಗೆ ಪರಿಗಣಿಸುವುದು ಕನ್ನಡ ಮತ್ತು ಭಾರತದ ಸಾಹಿತ್ಯ ಲೋಕಕ್ಕೆ ಸಂದ ಗೌರವವಾಗಿದೆ.

ಈ ನಿರ್ಧಾರಗಳು ಕೇವಲ ಪ್ರಶಸ್ತಿಗಳ ವಿತರಣೆಗಿಂತ ಹೆಚ್ಚಾಗಿ, ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಪ್ರೋತ್ಸಾಹಿಸುವ ರಾಜ್ಯ ಸರ್ಕಾರದ ಬದ್ಧತೆಯನ್ನು ತೋರಿಸುತ್ತವೆ. ಇದು ಕನ್ನಡ ನಾಡಿನ ಕಲಾತ್ಮಕ ಮತ್ತು ಬೌದ್ಧಿಕ ಸಂಪತ್ತಿಗೆ ದೊರೆತ ಮನ್ನಣೆಯಾಗಿದೆ. ಈ ನಿರ್ಧಾರಗಳು ಯುವ ಪೀಳಿಗೆಗೆ ಪ್ರೇರಣೆಯಾಗಲಿವೆ.

### ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಕ್ರೀಡಾಪಟುಗಳು ಜಿಲ್ಲೆಯ ಕೀರ್ತಿ ಹೆಚ್ಚಿಸಿ



ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಗದಗ ಜಿಲ್ಲೆಯ ಹಾಕಿ ಕ್ರೀಡಾಪಟುಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿರುವುದು ನಮಗೆಲ್ಲ ಹೆಮ್ಮೆಯ ವಿಷಯವಾಗಿದೆ. ಜಿಲ್ಲಾ ಮಟ್ಟದಿಂದ ಈಗ ವಿಭಾಗ ಮಟ್ಟದ ಕ್ರೀಡಾಕೂಟಕ್ಕೆ ವಿವಿಧ ಜಿಲ್ಲೆಗಳಿಂದ ಕ್ರೀಡಾಪಟುಗಳು ಗದಗ ಜಿಲ್ಲೆಗೆ ಆಗಮಿಸಿದ್ದಾರೆ. ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಪಟುಗಳು ಪಾಲ್ಗೊಳ್ಳಬೇಕೆಂದು ಕರೆ ನೀಡಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡೆಗಳಿಂದ ಮಾನಸಿಕ ಹಾಗೂ ದೈಹಿಕ ಸದೃಢತೆ ಸಾಧ್ಯ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಗುರುವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ (ಫುಟ್ಬಾಲ್ ಮತ್ತು ಹಾಕಿ)ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡಾಪಟುಗಳು ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಿ ಕ್ರೀಡಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಗದಗ ಜಿಲ್ಲೆಯ ಕ್ರೀಡಾಪಟುಗಳು ರಾಜ್ಯ ಮಟ್ಟದಲ್ಲಿಯೂ ಪಾಲ್ಗೊಂಡು ಜಿಲ್ಲೆಗೆ ಕೀರ್ತಿ ತರಬೇಕೆಂದರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಮಾತನಾಡಿ, ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಕ್ಕೆ ವಿವಿಧ ಜಿಲ್ಲೆಗಳಿಂದ ಕ್ರೀಡಾಪಟುಗಳು ಆಗಮಿಸಿದ್ದಾರೆ. ಕ್ರೀಡೆಗಳಲ್ಲಿ ಸೋಲು-ಗೆಲುವು ಮುಖ್ಯವಲ್ಲ. ಪಾಲ್ಗೊಳ್ಳುವುದೇ ಮುಖ್ಯ. ಕ್ರೀಡಾಪಟುಗಳು ನಿರ್ಣಾಯಕರ ನಿರ್ಣಯವನ್ನು ಪಾಲಿಸಿ ಕ್ರೀಡಾಕೂಟವನ್ನು ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳು (ಫುಟ್ಬಾಲ್ ಮತ್ತು ಹಾಕಿ) ಸೆಪ್ಟೆಂಬರ್ 11 ಮತ್ತು 12ರಂದು ಜರುಗುತ್ತಿವೆ. ಫುಟ್ಬಾಲ್ ಕ್ರೀಡಾಕೂಟ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಗೂ ಹಾಕಿ ಕ್ರೀಡಾಕೂಟ ಗದಗ-ಬೆಟಗೇರಿಯ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಜರುಗಲಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯ ಸುರೇಶ ಕಟ್ಟಿಮನಿ, ಮೋಹನ ಕಟ್ಟಿಮನಿ, ಹನುಮಂತಪ್ಪ ವೀರಾಪೂರ, ಎಚ್.ಬಿ. ಗಡಾದ, ಸರ್ಫರಾಜ್ ಶೇಖ್, ದೈಹಿಕ ಶಿಕ್ಷಕರು, ವಿವಿಧ ಜಿಲ್ಲೆಗಳಿಂದ ಆಗಮಿಸಿದ ಕ್ರೀಡಾಪಟುಗಳು ಹಾಜರಿದ್ದರು. ಎಂ.ಎ. ಯರಗುಡಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಯೆಮೆನ್ ಮೇಲೆ ಇಸ್ರೇಲ್ ವಾಯುದಾಳಿ: 35 ಜನರು ಸಾವು

■ವಿಜಯಸಾಕ್ಷಿ ಸುದ್ದಿ, ಕತಾರ್

ಕತಾರ್ ರಾಜಧಾನಿ ದೋಹಾದಲ್ಲಿ ಹಮಾಸ್ ನಾಯಕರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದ ಒಂದು ದಿನದ ನಂತರ, ಯೆಮೆನ್ ರಾಜಧಾನಿ ಸನಾ ಮತ್ತು ಅಲ್-ಜಾಫ್ ಗವರ್ನರೇಟ್ ವ್ಯಾಪ್ತಿಯಲ್ಲಿ ಇಸ್ರೇಲ್ ನಡೆಸಿದ ವಾಯುದಾಳಿಯಿಂದ ಕನಿಷ್ಠ 35 ಜನರು ಸಾವನ್ನಪ್ಪಿದ್ದಾರೆ ಮತ್ತು ಹಲವರು ಗಾಯಗೊಂಡಿದ್ದಾರೆ ಎಂದು ಅಲ್-ಜಝೀರಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ಸನಾ ಮತ್ತು ಅಲ್-ಜಾಫ್ ಮೇಲೆ ಇಸ್ರೇಲ್ ನಡೆಸಿದ ಆಕ್ರಮಣದಲ್ಲಿ 131 ಜನರು ಗಾಯಗೊಂಡಿದ್ದಾರೆ.

## ಬಿಹಾರದಂತೆ ದೇಶದಾದ್ಯಂತ ಮತದಾರರ ಪಟ್ಟಿಯ ಪರಿಷ್ಕರಣೆಗೆ ಮುಂದಾದ ಚು.ಆಯೋಗ

■ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರದಂತೆ ದೇಶದಾದ್ಯಂತ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ನಡೆಸಲು ಚುನಾವಣಾ ಆಯೋಗ ಮುಂದಾಗಿದೆ. ಈ ಕುರಿತ ದಿನಾಂಕವನ್ನು ಶೀಘ್ರದಲ್ಲೇ ಘೋಷಿಸುವ ಸಾಧ್ಯತೆ ಇದೆ. ಒಟ್ಟಾರೆ, ಈ ವರ್ಷಾಂತ್ಯದ ಮೊದಲು ಮತದಾರರ ಪಟ್ಟಿಯ ಪರಿಷ್ಕರಣೆ ನಡೆಯಬಹುದು ಎಂದು ವರದಿಗಳು ಹೇಳಿವೆ.

ಬುಧವಾರ ನವದೆಹಲಿಯಲ್ಲಿ ಎಲ್ಲಾ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳ (ಸಿಇಒ) ಸುದೀರ್ಘ ಸಭೆ ನಡೆದಿದೆ. ಈ ಸಭೆಯಲ್ಲಿ ಮುಂದಿನ ಕೆಲ ರಾಜ್ಯಗಳ ವಿಧಾನಸಭೆ ಚುನಾವಣೆಗಳು ನಡೆಯಲಿರುವ ಹಿನ್ನೆಲೆ, 2025ರ ಅಂತ್ಯದೊಳಗೆ ಎಸ್‌ಐಆರ್ ನಡೆಸಲು ತೀರ್ಮಾನಿಸಲಾಗಿದೆ ಎಂದು ಅಧಿಕಾರಿಗಳನ್ನು ಉಲ್ಲೇಖಿಸಿ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.

ಸಭೆಯಲ್ಲಿ ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಮತ್ತು ಅನರ್ಹರು ಪಟ್ಟಿಯಲ್ಲಿ ಸೇರದಂತೆ ಎಚ್ಚರಿಕೆ ವಹಿಸಲು ದಾಖಲೆಗಳ ಸೂಕ್ತ ಪರಿಶೀಲನೆಯ ಕುರಿತು ಸಿಇಒಗಳು ಪ್ರಸ್ತಾಪಿಸಿದ್ದಾರೆ. ಅರ್ಹ ಮತದಾರರಿಗೆ ಸಲ್ಲಿಸಲು ಸುಲಭವಾಗುವಂತೆ ಚುನಾವಣಾ ಹೇಗೆ ಮತ್ತು ಯಾವೆಲ್ಲ ದಾಖಲೆಗಳನ್ನು ಕೇಳಬಹುದು ಎಂದು ಚರ್ಚಿಸಿದ್ದಾರೆ ಎನ್ನಲಾಗಿದೆ.

## ಪುರಸಭೆಯೆದುರು ಖಾಲಿ ಕೊಡ ಪ್ರದರ್ಶನ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಪಟ್ಟಣದಲ್ಲಿ ಸಮರ್ಪಕ ನೀರು ಪೂರೈಕೆಯಲ್ಲಿ ಪುರಸಭೆ ಪದೇ ಪದೇ ವಿಫಲವಾಗುತ್ತಿದ್ದು, 25-30 ದಿನಗಳಿಂದ ನೀರು ಪೂರೈಕೆಯಾಗದಿರುವದನ್ನು ಪ್ರತಿಭಟಿಸಿ ಹತ್ತಾರು ಮಹಿಳೆಯರು ಪುರಸಭೆ ಎದುರಿನಲ್ಲಿ ಖಾಲಿ ಕೊಡಗಳೊಂದಿಗೆ ಪ್ರತಿಭಟನೆ ನಡೆಸಿದರು.

ಪುರಸಭೆಯ 3ನೇ ವಾರ್ಡಿನ ಪಾಣಿಗಟ್ಟಿ ಓಣಿ ಮತ್ತು ಬೇವಿನಮರದ ಓಣಿಯವರು ನೀರು ಪೂರೈಸುವಂತೆ ಆಗ್ರಹಿಸಿ, ಕಳೆದ ಒಂದು ತಿಂಗಳಿಂದ ನಮ್ಮ ಭಾಗದಲ್ಲಿ ಕುಡಿಯುವ ನೀರು ಸರಬರಾಜಾಗಿಲ್ಲ. ದಿನ ಬೆಳಗಾದರೆ ಸವಳು ನೀರಿಗಾಗಿ ಕೊಡ ಹಿಡಿದು ಅಲೆಯುವುದು ತಪ್ಪಿಲ್ಲ. ಮಳೆಗಾಲ, ನದಿ ತುಂಬಿ ಹರಿಯುತ್ತಿದೆ ಆದರೂ ಪುರಸಭೆ ಆಡಳಿತ ಮಂಡಳಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳ ನಿರ್ಲಕ್ಷ್ಯದಿಂದ ಸಿಹಿ ನೀರು ಮರೀಚಿಕೆಯಾಗಿದೆ. ರೈತರು, ಕೂಲಿ ಕಾರ್ಮಿಕರು, ಬಡ, ಮಧ್ಯಮ ವರ್ಗದ ಜನರೇ ಹೆಚ್ಚಾಗಿರುವ ಈ ಓಣಿಗಳಲ್ಲಿ ಟ್ಯಾಂಕರ್ ನೀರು ಹಾಕಿಕೊಳ್ಳುವದು ದುಸ್ತರವಾಗುತ್ತದೆ. ಕೂಡಲೇ ನೀರು ಪೂರೈಸದಿದ್ದರೆ ಪುರಸಭೆ ಎದುರು ಧರಣಿ ನಡೆಸುವದಾಗಿ ಎಚ್ಚರಿಕೆ ನೀಡಿದರು. ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಪ್ರತಿಭಟನಾಕಾರರನ್ನು ಸಮಾಧಾನಪಡಿಸಿ, ಪದೇ ಪದೇ ಪೈಪ್‌ಲೈನ್ ದುರಸ್ತಿ, ವಿದ್ಯುತ್ ಸಮಸ್ಯೆಯಿಂದ ನೀರು ಸರಬರಾಜಿನಲ್ಲಿ ವ್ಯತ್ಯಯವಾಗುತ್ತಿದೆ. ಹೊಸ ಪೈಪ್‌ಲೈನ್ ಕಾಮಗಾರಿ ಪ್ರಾರಂಭವಾಗಲಿದ್ದು, ಶೀಘ್ರವೇ ಸಮಸ್ಯೆಯನ್ನು ಬಗೆಹರಿಸುವದಾಗಿ ಭರವಸೆ ನೀಡಿದರು.

ಈ ವೇಳೆ ಈಶಪ್ಪ ರೋಣದ, ಗಣೇಶ ನೂಲ್ವಿ, ಸೋಮಶೇಖರ ಕರೆಯತ್ತಿನ, ಬಸವರಾಜ ನಾಗಲೂಟಿ, ಸುರೇಶ ಶಿರಹಟ್ಟಿ, ಬಸಣ್ಣ ರೋಣದ, ನಿರ್ಮಲಾ ಪಾಣಿಗಟ್ಟಿ, ಲಕ್ಷ್ಮೀ ಪಾಣಿಗಟ್ಟಿ, ನಿರ್ಮಲಾ ಸಾಲಮನಿ, ಮಂಜವ್ವ ಪಾಣಿಗಟ್ಟಿ, ಶಿವಮ್ಮ ಪಾಣಿಗಟ್ಟಿ, ರೂಪಾ ನೀಲಪ್ಪಗೌಡ್ರ ಮುಂತಾದವರಿದ್ದರು.

### ಜಿಲ್ಲಾ ಮಟ್ಟದ ಸಂಸ್ಕೃತ ಶ್ರಾವಣಿ, ಯುಷ್ಮಾಕಂ ಸಂಸ್ಕೃತಂ ಸಮಾರೋಪ ಕಾರ್ಯಕ್ರಮ

# ಸಂಸ್ಕೃತ ಭಾಷೆ ಜ್ಞಾನದ ನಿಧಿ




■ವಿಜಯಸಾಕ್ಷಿ ಸುದ್ದಿ, ಗದಗ

ಜ್ಞಾನದ ನಿಧಿಯನ್ನು ಒಳಗೊಂಡ ಭಾಷೆ ಸಂಸ್ಕೃತ. ಇದನ್ನು ಸರ್ವರೂ ಅಧ್ಯಯನ ಮಾಡುತ್ತಾ ಮನನ ಮಾಡಿಕೊಳ್ಳಬೇಕು. ಸಂಸ್ಕೃತ ಭಾಷೆ ಅಪಾರ ಜ್ಞಾನ ಸಂಪತ್ತುಳ್ಳ ಭಾಷೆಯಾಗಿದೆ. ಪುಟ್ಟರಾಜ ಗುರುಗಳೂ ಸಹ ಸಂಸ್ಕೃತದಲ್ಲಿ ಪ್ರಕಾಂಡ ಪಂಡಿತರಾಗಿದ್ದರು. ಈ ಭಾಷೆಯನ್ನು ಕಲಿತ ಸರ್ವರೂ ಸುಸಂಸ್ಕೃತರಾಗಿ ಬಾಳುತ್ತಾರೆ ಎಂದು ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಪರಮ ಪೂಜ್ಯ ಶ್ರೀ ಕಲ್ಲಯ್ಯಜ್ಜನವರು ಆಶೀರ್ವಚನ ನೀಡಿದರು.

ಗದಗ ನಗರದ ಡಾ. ಪಂ.ಪುಟ್ಟರಾಜ ಗವಾಯಿಗಳ ಸಂಸ್ಕೃತ ಪಾಠಶಾಲೆಯಲ್ಲಿ ಜಿಲ್ಲಾ ಮಟ್ಟದ ಸಂಸ್ಕೃತ ಶ್ರಾವಣಿ ಮತ್ತು ಯುಷ್ಮಾಕಂ ಸಂಸ್ಕೃತಂ ಸಮಾರೋಪ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಧಾರವಾಡ ವಲಯ ಸಂಸ್ಕೃತ ಪಾಠಶಾಲಾ ವಿಷಯ ಪರಿವೀಕ್ಷಕರು ಮತ್ತು ಡಿ.ಜಿ.ಎಂ ಸಂಸ್ಕೃತ ಪಾಠಶಾಲೆಯ ಮುಖ್ಯ ಶಿಕ್ಷಕರಾದ ಜಿ.ಎಸ್. ಗಾಂವ್ಕರ್ ಮಾತನಾಡಿ, ಹಿಂದಿನಿಂದ ನಡೆಸಿಕೊಂಡು ಬಂದ ಕಾರ್ಯಕ್ರಮವನ್ನು ಮತ್ತಷ್ಟು ಚೆನ್ನಾಗಿ ನಡೆಸಬೇಕು. ಎಲ್ಲ ಸಂಸ್ಕೃತ ಪಾಠಶಾಲೆಗಳ ಶಿಕ್ಷಕರು ಉತ್ಸಾಹದಿಂದ ಇದರಲ್ಲಿ ಪಾಲ್ಗೊಂಡು ಸಂಸ್ಕೃತವನ್ನು ಪ್ರಚಾರ-ಪ್ರಸಾರ ಮಾಡಬೇಕು ಎಂದರು.

ಭಾಷಣ, ಕಂಠಪಾಠ, ಪ್ರಬಂಧ ಸ್ಪರ್ಧೆಗಳ ನಿರ್ಣಾಯಕರಾಗಿ ಆಗಮಿಸಿದ್ದ ಜ.ತೋಂಟದಾರ್ಯ ಸಂ.ಪಾ. ನಿವೃತ್ತ ಮುಖ್ಯ ಗುರುಗಳಾದ ಎಸ್.ವಿ. ಹಿರೇಮಠ ನಿವೃತ್ತ ಮುಖ್ಯ ಗುರುಮಾತೆಯರಾದ ಜಯಶ್ರೀ ಮೆಳ್ಳಿಗೇರಿಯವರೊಂದಿಗೆ ಅತ್ಯಂತ ಪರಿಶ್ರಮದಿಂದ ನಿರ್ಣಯ ಕೈಗೊಳ್ಳಲಾಗಿದೆ. ಯಾರಿಗೆ ಬಹುಮಾನ ಬಂದಿಲ್ಲವೋ ಅವರು ಹತಾಶರಾಗದೆ ಮತ್ತೆ ಪ್ರಯತ್ನಿಸಿದರೆ ಖಂಡಿತ ಯಶಸ್ಸು ಗಳಿಸುವಿರಿ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ಪಿ.ಜಿ.ಎ.ಎಸ್ ಸಮಿತಿಯ ಆಡಳಿತಾಧಿಕಾರಿ ಪಿ.ಸಿ. ಹಿರೇಮಠ ಮಾತನಾಡಿ, 1995-96ರಲ್ಲಿ ಉಡುಪಿಯಲ್ಲಿ ಜರುಗಿದ ಸಂಸ್ಕೃತ ಸಮ್ಮೇಳನದಲ್ಲಿ ತ್ರಿಭಾಷಾ ಕವಿಗಳಾದ ಪೂಜ್ಯ ಪುಟ್ಟರಾಜ ಗವಾಯಿಗಳು ಭಾಗವಹಿಸಿದ್ದನ್ನು ಸ್ಮರಿಸಿದರಲ್ಲದೆ, ಸಂಸ್ಕೃತ ಪಾಠಶಾಲೆಗೆ ಸದಾಕಾಲ ನೆರವು ನೀಡುವುದಾಗಿ ತಿಳಿಸಿದರು.

2025ನೇ ಸಂಸ್ಕೃತ ಪ್ರಸಿದ್ಧ ಪರೀಕ್ಷೆಯಲ್ಲಿ ಸ್ಥಾನ ಪಡೆದವರಿಗೆ ಮತ್ತು ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ವಿತರಿಸಲಾಯಿತು.

ಜ.ಪಂ. ಪಾಠಶಾಲೆಯ ಮುಖ್ಯ ಶಿಕ್ಷಕರಾದ ಗುರುಶಿದ್ಧಯ್ಯ ಹಿರೇಮಠ ಹಾಗೂ ಬಿ.ಜಿ.ಅ. ಸಂ.ಪಾ ಕಳಕಪ್ಪ ಕುರ್ತಕೋಟಿ ಕಾರ್ಯಕ್ರಮ ನಿರೂಪಿಸಿದರು. ತೋಂಟದಾರ್ಯ ಸಂಸ್ಕೃತ ಪಾಠಶಾಲೆಯ ಮುಖ್ಯ ಶಿಕ್ಷಕರಾದ ಎಸ್.ಎನ್. ಶಿಂಪಿಗೇರ ಸ್ವಾಗತಿಸಿದರು. ಗದಗ ಜಿಲ್ಲಾ ಸಂ.ಪಾ.ಶಾ ಸಂಘ ಅಧ್ಯಕ್ಷ ಎಸ್.ಎಸ್. ಸಾಲಿಮಠ ವಂದಿಸಿದರು. ಧಾರವಾಡ ವಲಯ ಸಂಸ್ಕೃತ ಪಾಠಶಾಲೆಗಳ ಸಂಯೋಜಕರು, ಬಿ.ಬಿ. ಆರೇರ ಗುರುಗಳು ಸಂಸ್ಕೃತ ಗೀತೆ ಹಾಡಿದರು.



ಬಹುಜನ ಸಮಾಜ ಪಾರ್ಟಿಯ ಲಕ್ಷ್ಮೇಶ್ವರ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ತಾಲೂಕಾಧ್ಯಕ್ಷ ಮಂಜುನಾಥ ಮುಶಪ್ಪನವರ ನೇತೃತ್ವದಲ್ಲಿ ಬುಧವಾರ ನಡೆಯಿತು. ಚಂದ್ರಶೇಖರ ಸೂರಣಗಿ ಶಿರಹಟ್ಟಿ (ಕಾರ್ಯದರ್ಶಿ), ಬಸವರಾಜ ಬಂಡಿವಡ್ಡರ (ಉಪಾಧ್ಯಕ್ಷ), ಶಿವಾನಂದ ಅರಳಿಕಟ್ಟಿ ತಾಲೂಕಾ ಉಪಾಧ್ಯಕ್ಷ, ಮಂಜುನಾಥ ದೊಡ್ಡಮನಿ ಖಜಾಂಚಿ, ಮಾರುತಿ ಕನವಳ್ಳಿ (ಸಹ ಕಾರ್ಯದರ್ಶಿ) ಯನ್ನಾಗಿ ಆಯ್ಕೆ ಮಾಡಲಾಯಿತು. ಸಂಯೋಜಕ ಸೋಮಪ್ಪ ಮುಶಪ್ಪನವರ, ಹನುಮಂತಪ್ಪ ಗುತ್ತಲ, ಮುದಕಪ್ಪ ಗುತ್ತಲ ಹಾಗೂ ಸದಸ್ಯರಿದ್ದರು.

## ಕ್ರೀಡೆಗೆ ವಿಶೇಷ ಮಹತ್ವ ದೊರೆಯುತ್ತಿದೆ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಕ್ರೀಡೆಯಲ್ಲಿ ಸೋಲು-ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸಿಬೇಕು. ಆಗ ಕ್ರೀಡೆಯ ಮಹತ್ವ ಹೆಚ್ಚುತ್ತದೆ ಎಂದು ಬಿಇಓ ಎಚ್.ಲೇಪಾಕ್ಷಪ್ಪ ತಿಳಿಸಿದರು.

ಹರಪನಹಳ್ಳಿ ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಬುಧವಾರ ನಡೆದ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳ ತಾಲೂಕು ಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಲಾ ಹಂತದಲ್ಲಿ ಮಗುವಿನ ಪ್ರತಿಭೆಗೆ ಅನುಸಾರ ಅವನಿಷ್ಟದ ಆಟವನ್ನು ಆಡಲು ಸಹಕರಿಸಬೇಕು. ಆಗ ಉನ್ನತ ಕ್ರೀಡಾಪಟುವಾಗಿಸಲು ಸಾಧ್ಯವಾಗುತ್ತದೆ. ದೇಶದಲ್ಲಿ ಕ್ರೀಡೆಗೆ ವಿಶೇಷ ಮಹತ್ವ ದೊರೆಯುತ್ತಿದ್ದು, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳಲು ಇದು ಉತ್ತಮ ವೇದಿಕೆಯಾಗಿದೆ ಎಂದರು.

ಟಿಪಿಇಓ ಕೆ.ಷಣ್ಮುಖಪ್ಪ ಮಾತನಾಡಿ, ಆಟಗಳಲ್ಲಿ ಮಕ್ಕಳು ಭಾಗವಹಿಸುವುದರಿಂದ ಮಗುವಿನ ಆರೋಗ್ಯದ ಜೊತೆ-ಗೆ ದೈಹಿಕ ಸಾಮರ್ಥ್ಯ ಹೆಚ್ಚಿ, ಮಾನಸಿಕ ಸಮತೋಲನ ಕಂಡುಕೊಳ್ಳಬಹುದಾಗಿದೆ. ಕ್ರೀಡೆಯಲ್ಲಿ ಎಲ್ಲಾ ಕೀಳರಿಮೆಯ ಭಾವನೆಯನ್ನು ಬಿಟ್ಟು ಸಹೋದರತ್ವ ಭಾವನೆಯಿಂದ ಆಟವಾಡಬೇಕು ಎಂದರು.

ಕ್ಷೇತ್ರ ಸಮನ್ವಯಾಧಿಕಾರಿ ಎಸ್. ಹೊನ್ನತ್ತೆಪ್ಪ, ಬಿಸಿಯೂಟ ಯೋಜನೆಯ ಸಹಾಯಕ ನಿರ್ದೇಶಕ ಕೆ. ನಾಗರಾಜ್, ದೈಹಿಕ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಜನಾರ್ಧನ ರೆಡ್ಡಿ, ಗ್ರೇಡ್ 1 ದೈಹಿಕ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಜಯಪ್ರಕಾಶ್, ಗ್ರೇಡ್ 2 ದೈಹಿಕ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಜಯಣ್ಣ ಪೂಜಾರ, ಜಿಲ್ಲಾ ಗೌರವಾಧ್ಯಕ್ಷ ಎಸ್.ಆರ್. ನಾರೇರ್, ಮಂಜ್ಯಾನಾಯ್ಕ, ಲಕ್ಯಾನಾಯ್ಕ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಬಂದೋಳ್ ಸಿದ್ದೇಶ್, ಕಾರ್ಯದರ್ಶಿ ರಾಜಕುಮಾರ್, ಎಸ್.ರಾಮಪ್ಪ, ರಾಂಮಚಂದ್ರಪ್ಪ, ದಂಡೆಪ್ಪ, ದಾದಾಪೀರ್, ಲಕ್ಮೀದೇವಿ, ನಂದಿನಿ ಒಡೆಯರ್, ನಾಗರತ್ನಮ್ಮ, ಎಂ. ರಮೇಶ್ ಮುಂತಾದವರಿದ್ದರು.

### ನಿವೃತ್ತ ಸೈನಿಕ ರಾಮಣ್ಣ ಉಡಚಪ್ಪ ಹೊಸೂರರಿಗೆ ಸನ್ಮಾನ

# ಸೇನೆಯ ಅನುಭವವನ್ನು ಮರೆಯಲಾಗದು

■ವಿಜಯಸಾಕ್ಷಿ ಸುದ್ದಿ, ಡಂಬಳ

ಪೂರ್ವಜನ್ಮದ ಪುಣ್ಯದ ಫಲವಾಗಿ ಸೇನೆಯಲ್ಲಿ ಸೇವೆ ಸಲ್ಲಿಸುವ ಅವಕಾಶ ಸಿಕ್ಕಿತ್ತು. ದೇಶದ ವಿವಿಧೆಡೆ ಕೆಲ ಕಠಿಣ ಸಂದರ್ಭಗಳಲ್ಲೂ ಸೇವೆ ಸಲ್ಲಿಸಿರುವ ಅನುಭವವನ್ನು ಮರೆಯಲಾಗದು. ಸೇನೆಯಲ್ಲಿ ಸೇವೆ ಸಲ್ಲಿಸಿ ಮರಳಿ ಬಂದ ನನಗೆ ಗೌರವಿಸಿರುವುದು ದೇಶವನ್ನು ಕಾಯುತ್ತಿರುವ ಪ್ರತಿಯೊಬ್ಬ ಭಾರತೀಯ ಸೈನಿಕನಿಗೆ ಸ್ಫೂರ್ತಿಯಾಗಿದೆ ಎಂದು ನಿವೃತ್ತ ಸೈನಿಕ ರಾಮಣ್ಣ ಉಡಚಪ್ಪ ಹೊಸೂರ ಹೇಳಿದರು.

ಡಂಬಳ ಹೋಬಳಿಯ ಕದಾಂಪು ಗ್ರಾಮದ ಸರಕಾರಿ ಶಾಲಾ ಆವರಣದಲ್ಲಿ ಭಾರತೀಯ ಸೇವೆಯಲ್ಲಿ 24 ವರ್ಷಗಳ ದೇಶ ಸೇವೈಗೆದ ವೀರ ದಳಪತಿ, ಸಾರ್ಥಕ ಸೇವಾ ಸೇನಾ ರತ್ನ ರಾಮಣ್ಣ ಉಡಚಪ್ಪ ಹೊಸೂರರ ಅಭಿನಂದನಾ ಸಮಾರಂಭ ಮತ್ತು ಶಿಕ್ಷಕರ




ದಿನಾಚರಣೆ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಮುಖಂಡ ರಾಮಣ್ಣಗೌಡ್ರ ಹಿರೇಗೌಡ್ರ, ಬಸವಂತಪ್ಪ ಬಡಿಗೇರ ಮಾತನಾಡಿ, ರಾಮಣ್ಣ ಹೊಸೂರ ಅವರು 6ನೇ ತರಗತಿಯಲ್ಲಿಯೇ ಬಾವಿಯಲ್ಲಿ ಬಿದ್ದ ವಿದ್ಯಾರ್ಥಿಯನ್ನು ಕಾಪಾಡಿ ರಾಷ್ಟ್ರಪತಿ ಪ್ರಶಸ್ತಿ ಪಡೆದಿದ್ದರು. ಸೇನೆಯಲ್ಲಿ 24 ವರ್ಷಗಳ ಕಾಲ ಸೇವೆ ಸಲ್ಲಿಸಿರುವ ಅವರ ಕಾರ್ಯ ಶ್ರೇಷ್ಠವಾದದ್ದು ಎಂದರು.

ವೇ.ಮೂ ಕುಮಾರಸ್ವಾಮಿ ಹಿರೇಮಠ ಮಾತನಾಡಿ, ದೇಶದ ಆತ್ಮವಿಶ್ವಸ ಎಂದರೆ ರೈತರು, ಸೈನಿಕರು, ಗುರುವೃಂದ. ಅವರ ಮೌಲ್ಯಯುತ ಕೊಡುಗೆ ಸದಾಕಾಲ ಇರುತ್ತವೆ. ಆ ಹಿನ್ನೆಲೆಯಲ್ಲಿ ಉತ್ತಮ ಸೇವೆ ಸಲ್ಲಿಸಿರುವ ರಾಮಣ್ಣ ಅವರ ಕಾರ್ಯ ಅಮೋಘವಾದದ್ದು ಎಂದರು.

ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಬಸವಲಿಂಗಪ್ಪ ಮುಂಡರಗಿ ಮಾತನಾಡಿ, ಕದಾಂಪುರ ಗ್ರಾಮಸ್ಥರು ಸೈನಿಕರನ್ನು ಅಭೂತಪೂರ್ವವಾಗಿ ಬರಮಾಡಿಕೊಂಡು ಗೌರವ ಸಲ್ಲಿಸುತ್ತಿರುವುದು ಪ್ರಶಂಸನೀಯ ಎಂದರು. ಯುವ ಮುಖಂಡ ಪ್ರವೀಣ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ರಾಮದ ರೈತರನ್ನು, 20ಕ್ಕೂ ಹೆಚ್ಚು ಮಾಜಿ ಸೈನಿಕರನ್ನು, ಪ್ರಾಥಮಿಕ, ಪ್ರೌಢಶಾಲಾ ಗುರುವೃಂದವನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಅಧ್ಯಕ್ಷೆ ಹುಲಿಗೆಮ್ಮ ಉಡಚನಗೌಡ ಪಾಟೀಲ, ವೆಂಕನಗೌಡ ಪಾಟೀಲ, ಚೆನ್ನವಿರಯ್ಯ ಸಾಲಿಮಠ, ದ್ಯಾಮಣ್ಣ ಹುಲ್ಲಣ್ಣವರ, ರೇವಣಸಿದ್ದಪ್ಪ ಸಂಕಣ್ಣವರ, ಸೇಕರಯ್ಯ ಹಿರೇಮಠ, ನಿಂಗಪ್ಪ ಗುರುವಿನ, ಲಕ್ಷ್ಮಣ್ಣ ಕಟಿಗ್ಗಾರ, ಶಾಂತಯ್ಯ ಮುತ್ತಿನಪೆಂಮಠ, ವಿಶ್ವನಾಥ ಸಾಲಿಮಠ, ಬಸುರಾಜ ನರೇಗಲ್ಲ, ಶೇಖಪ್ಪ ಹುಲ್ಲಣ್ಣವರ, ರುದ್ರಪ್ಪ ಅಡ್ರಗಟ್ಟಿ, ಪ್ರಭು ಕಾರಪುಡಿ, ಎ.ಎಲ್. ಬಿಜಾಪುರ, ಎಸ್.ಎಸ್. ಆದಪ್ಪನವರ, ಗುರುರಾಜ ಗೌರಿ, ಪ್ರದೀಪ ನಾಯಕ ಇದ್ದರು.

### ಬಗರ್‌ಹುಕುಂ ರೈತರ ಅಹೋರಾತ್ರಿ ಧರಣಿಗೆ ಸಚಿವ ಎಚ್.ಕೆ. ಪಾಟೀಲ ಸ್ಪಂದನೆ

# ರೈತರ ಮನೆ ಬಾಗಿಲಿಗೆ ಜಿಲ್ಲಾಡಳಿತ



■ ವಿಜಯಸಾಕ್ಷಿ ಸುದ್ದಿ, ಗದಗ

ಸತತ 23 ದಿನಗಳಿಂದ ನಡೆದ ರೈತರ ಅಹೋರಾತ್ರಿ ಧರಣಿ ಸ್ಥಳಕ್ಕೆ ಬುಧವಾರ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಭೇಟಿ ನೀಡಿ ರೈತರ ವಿವಿಧ ಬೇಡಿಕೆಗಳಿಗೆ ಸ್ಪಂದಿಸಿ, ನೈಜ್ಯ ಸಾಗುವಳಿದಾರರಿಗೆ ಹಕ್ಕುಪತ್ರ ಹಾಗೂ ಸಮಸ್ಯೆಗಳಿಗೆ ಪರಿಹಾರ ದೊರಕಿಸಿಕೊಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಉತ್ತರ ಕರ್ನಾಟಕ ಮಹಾಸಭಾದ ಅಧ್ಯಕ್ಷ ರವಿಕಾಂತ ಅಂಗಡಿ ಮಾತನಾಡಿ, ತಲೆತಲಾಂತರಗಳಿಂದ ರೈತರು ಅರಣ್ಯ ಜಮೀನುಗಳನ್ನು ಉಪಜೀವನಕ್ಕಾಗಿ ಸಾಗುವಳಿ ಮಾಡಿಕೊಂಡು ಬಗರ್‌ಹುಕುಂ ಕೃಷಿ ಮಾಡುತ್ತಿದ್ದಾರೆ. ಆದರೆ ಸರ್ಕಾರ ಹಕ್ಕುಪತ್ರ ನೀಡದೆ ಕಿರುಕುಳ ನೀಡುತ್ತಿದೆ. ನಾಗಾವಿ ಗ್ರಾಮದಲ್ಲಿ ಜಮೀನುಗಳನ್ನು ನಾಲ್ಕು ತಲೆಮಾರುಗಳಿಂದ ನೂರಾರು ಕುಟುಂಬಗಳು ಬಳಸಿಕೊಂಡು ಬಂದಿದ್ದರೂ ಯಾವುದೇ ಪರಿಹಾರ ನೀಡದೆ ಒಕ್ಕಲೆಬ್ಬಿಸಿರುವುದು ಖಂಡನೀಯ ಎಂದರು.

ರೈತರ ಬೇಡಿಕೆಗಳಿಗೆ ಸ್ಪಂದಿಸಿದ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಈ ಹೋರಾಟ ಇದೇ ಮೊದಲಲ್ಲ. ಹಿಂದೆಯೂ ನೀವು ಹೋರಾಟ ಮಾಡಿದಾಗ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದೆ. ಆದರೆ ಜಿಲ್ಲೆಯಲ್ಲಿ ಮೂರನೇ ಬಾರಿ ಜಿಲ್ಲಾಧಿಕಾರಿಗಳು ಬದಲಾಗಿದ್ದಾರೆ. ಎಡಿಸಿ ನೇತೃತ್ವದಲ್ಲಿ ಸಮಿತಿಯನ್ನು ರಚಿಸಿ ವರದಿ ನೀಡಲು ಸೂಚಿಸಲಾಗಿತ್ತು, ಆದರೆ ವರದಿ ಇನ್ನೂ ಸಿಕ್ಕಿಲ್ಲ.

ಈಗ ಜಿಲ್ಲಾಧಿಕಾರಿಗಳು, ಎಡಿಸಿ, ಎಸಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳ ಸಮಿತಿಯು ಪ್ರತಿಯೊಬ್ಬ ರೈತರ ಮನೆ ಬಾಗಿಲಿಗೆ ತೆರಳಿ ಸಮಸ್ಯೆಗಳನ್ನು ಪರಿಶೀಲಿಸಿ ಪರಿಹಾರ ಹಾಗೂ ಹಕ್ಕುಪತ್ರ ಕುರಿತು ಅಕ್ಟೋಬರ್ 2ರೊಳಗೆ ವರದಿ ಸಲ್ಲಿಸಬೇಕು. ಬಳಿಕ ರೈತರೊಂದಿಗೆ ಸಭೆ ನಡೆಸಿ ನ್ಯಾಯ ಒದಗಿಸಬೇಕು ಎಂದು ಸೂಚಿಸಿದರು.

ನಾನು ಅಧಿಕಾರದಲ್ಲಿ ಇರಲಿ ಬಿಡಲಿ, ನೈಜ ಸಾಗುವಳಿದಾರರಿಗೆ ಹಕ್ಕುಪತ್ರ ದೊರಕುವವರೆಗೆ ಹೋರಾಟ ನಡೆಸುತ್ತೇನೆ ಎಂದು ರೈತರಿಗೆ ಭರವಸೆ ನೀಡಿದರು. ವಿಂಡ್ ಪವರ್ ಕಂಪನಿಗಳು ಜಿಲ್ಲೆಯಲ್ಲಿ ಜಮೀನು ಖರೀದಿಸುತ್ತಿದ್ದು, ಏಜೆಂಟರು ರೈತರಿಗೆ ಕಡಿಮೆ ಹಣ ನೀಡಿ ಮೋಸ ಮಾಡುವ ಘಟನೆಗಳು ನಡೆದಿವೆ. ಕೆಲವರಿಗೆ ಹೆಚ್ಚಾಗಿ ಹಣ ನೀಡುವ ಮೂಲಕ ದಾರಿ ತಪ್ಪಿಸುತ್ತಿದ್ದಾರೆ. ಆದ್ದರಿಂದ ರೈತರು ಜಾಗೃತರಾಗಿರಿ. ನಿಮ್ಮ ಜಮೀನಿನ ನಿಜವಾದ ಮೌಲ್ಯ ತಿಳಿಯಲು ಜಿಲ್ಲಾಧಿಕಾರಿಗಳ ಬಳಿ ಹೋಗಿ, ಮೋಸಕ್ಕೆ ಒಳಗಾಗಬೇಡಿ ಎಂದು ಸಚಿವರು ಎಚ್ಚರಿಕೆ ನೀಡಿದರು.

ಈ ವೇಳೆ ಡಿಸಿ ಸಿ.ಎನ್. ಶ್ರೀಧರ್, ಎಸ್‌ಪಿ ರೋಹನ್ ಜಗದೀಶ, ಸಿದ್ದು ಪಾಟೀಲ, ಅಪ್ಪಣ್ಣ ಇನಾಮತಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬರ್ಜಿ, ಬಿ.ಎಸ್. ಚಿಂಚಲಿ, ಪ್ರೊ. ಎನ್.ಟಿ. ಪೂಜಾರ, ಸುರೇಶ ಮಹಾರಾಜ, ಫಿರೋಜ್ ನದಾಫ್, ಚಂಬಣ್ಣ ಚನ್ನಪಟ್ಟಣ, ನಾಮದೇವ ಸೇರಿದಂತೆ ಹೋರಾಟಗಾರರು ಉಪಸ್ಥಿತರಿದ್ದರು.

> ಮಾನ್ಯ ಸಚಿವ ಎಚ್.ಕೆ. ಪಾಟೀಲರು ನಮ್ಮ ಹೋರಾಟಕ್ಕೆ ಸ್ಪಂದಿಸಿದ್ದು ಸಂತೋಷದ ವಿಷಯ. ಸಚಿವರ ಸೂಚನೆಯಂತೆ ಜಿಲ್ಲಾಧಿಕಾರಿಗಳು, ಎಸಿ ಮತ್ತು ಎಡಿಸಿ ಸಮಿತಿ ರಚಿಸಿ ವರದಿ ತಯಾರಿಸಿ ನೈಜ ಸಾಗುವಳಿದಾರರಿಗೆ ನ್ಯಾಯ ಒದಗಿಸಿಕೊಡಲಿ.
>
> **– ರವಿಕಾಂತ ಅಂಗಡಿ.**
> ರಾಜ್ಯಾಧ್ಯಕ್ಷರು, ಉತ್ತರ ಕರ್ನಾಟಕ ಮಹಾಸಭಾ.

**ರೈತರಿಗೆ ಉಚಿತ ಆರೋಗ್ಯ ತಪಾಸಣೆ**

23 ದಿನಗಳಿಂದ ಹೋರಾಟದಲ್ಲಿ ಪಾಲ್ಗೊಂಡಿದ್ದ ರೈತರು ಮತ್ತು ಮಹಿಳೆಯರಿಗೆ ಬುಧವಾರ ಸಚಿವರ ಭೇಟಿಯ ನಂತರ ಡಿಜಿಎಮ್ ಆಯುರ್ವೇದಿಕ್ ಕಾಲೇಜಿನ ವೈದ್ಯರು ಉಚಿತ ಆರೋಗ್ಯ ತಪಾಸಣೆ ನಡೆಸಿದರು.

## ಮಾಗಡಿಯಲ್ಲಿ ಗಣೇಶ ವಿಸರ್ಜನೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ಮಾಗಡಿ ಗ್ರಾಮದ ರಂಗಮಂದಿರದ ಶ್ರೀ ಗಜಾನನೋತ್ಸವ ಸೇವಾ ಸಮಿತಿಯ ವತಿಯಿಂದ ಕುಂದಾಪುರದ ಚಂಡೆ ಮದ್ದಳೆ ವಾದ್ಯಗಳೊಂದಿಗೆ ವಿಜೃಂಭಣೆಯಿಂದ ಗಣೇಶ ವಿಸರ್ಜನೆಯನ್ನು ಗ್ರಾಮದ ಕೆರೆಯಲ್ಲಿ ನೆರವೇರಿಸಲಾಯಿತು.

ಮೆರವಣಿಗೆಗೆ ಚಾಲನೆ ನೀಡಿದ ಮುಖಂಡ ಬಿ.ಡಿ. ಪಲ್ಲೇದ ಮಾತನಾಡಿ, ಆಧುನಿಕ ಭರಾಟೆಯಲ್ಲಿ ಗಣೇಶ ವಿಸರ್ಜನೆಗೆ ಡಿಜೆ ಬಳಕೆ ಮಾಡುತ್ತಿರುವುದು ಶಬ್ದ ಮಾಲಿನ್ಯದ ಜೊತೆಗೆ ಸಾರ್ವಜನಿಕರಿಗೂ ಸಹ ಕಿರಿಕಿರಿಯಾಗುತ್ತಿದೆ, ಇದನ್ನು ತಪ್ಪಿಸುವುದಕ್ಕಾಗಿ ನಮ್ಮ ಸನಾತನ ಪರಂಪರೆಯನ್ನು ಬಿಂಬಿಸುವ ಚಂಡೆ-ಮದ್ದಳೆ ವಾದ್ಯಗಳನ್ನು ಇಂದಿನ ಯುವಕರಿಗೆ ಪರಿಚಯಿಸುವ ಕೆಲಸವನ್ನು ಸಮಿತಿ ವತಿಯಿಂದ ನೆರವೇರಿಸಲಾಗಿದೆ.

ಮುಂದಿನ ದಿನಗಳಲ್ಲಿ ಇಂತಹ ಜಾನಪದ ಕಲೆಯನ್ನು ಬಿತ್ತರಿಸುವ ಕಲೆಯನ್ನು ಇಂತಹ ಉತ್ಸವಗಳಲ್ಲಿ ಪರಿಚಯಿಸುವ ಕೆಲಸ ಮಾಡಲಾಗುವುದು ಎಂದರು.

ಪಿಎಸ್‌ಐ ಚನ್ನಯ್ಯ ದೇವೂರ ಮತ್ತು ಸಿಬ್ಬಂದಿ ಅಗತ್ಯ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿದ್ದರು. ಶಿವಾನಂದ ಕೋಳಿವಾಡ, ಶಿವಾನಂದ ಮುಳಗುಂದ, ನಿಂಗಪ್ಪ ಕೋಳಿವಾಡ, ಮಂಜುನಾಥ ಪಾಟೀಲ, ಓಂಕಾರೇಶ ಗದಗ, ಪ್ರಕಾಶ ಕಮ್ಮಾರ, ಮಾದೇವಪ್ಪ ಅಣ್ಣಿಗೇರಿ, ಚನ್ನಪ್ಪ ನಿಡುವಣಿ, ಬಸನಗೌಡ ಬಂಡಿ, ಫಕ್ಕೀರೇಶ ಪಾಟೀಲ ಹಾಗೂ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

### ತಾಲೂಕು ಪಂಚಾಯಿತಿಯ ಸಾಮಾನ್ಯ ಸಭೆ, ಕೆಡಿಪಿ ಸಭೆ

## ಸೂಕ್ತ ಕ್ರಿಯಾಯೋಜನೆಯೊಂದಿಗೆ ಕಾಮಗಾರಿ ನಡೆಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ತಾ.ಪಂ ಕಚೇರಿ ಸಭಾಂಗಣದಲ್ಲಿ ಬುಧವಾರ ತಾ.ಪಂ ಸಾಮಾನ್ಯ ಸಭೆ ಮತ್ತು ಕೆಡಿಪಿ ಸಭೆಗಳು ನಡೆದವು. ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದು ತಮ್ಮ ತಮ್ಮ ಇಲಾಖೆಯ ಪ್ರಗತಿಯ ವರದಿಯನ್ನು ಸಲ್ಲಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ತಾ.ಪಂ ಆಡಳಿತಾಧಿಕಾರಿ ಎಂ.ವಿ. ಚಳಗೇರಿ, ಯಾವುದೇ ಇಲಾಖೆಗಳ ಕೆಲಸಗಳ ಕುರಿತು ಸರಿಯಾಗಿ ಕ್ರಿಯಾಯೋಜನೆ ಸಿದ್ಧಪಡಿಸಿ ಕಾಮಗಾರಿಯನ್ನು ಅನುಷ್ಠಾನಕ್ಕೆ ತರಬೇಕು. ಒಮ್ಮೆ ಮಾಡಿದ ಕ್ರಿಯಾಯೋಜನೆಯಲ್ಲಿ ಆ ಕಾಮಗಾರಿ ಪೂರ್ಣಗೊಳ್ಳಬೇಕು. ಅರ್ಧ ಆಗುವ ರೀತಿಯಲ್ಲಿ ಕ್ರಿಯಾಯೋಜನೆ ಸಿದ್ಧಪಡಿಸಬಾರದು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.




ತಾಲೂಕಿನಲ್ಲಿ ಅಂಗನವಾಡಿ ಕಟ್ಟಡಗಳು ಅರ್ಧಕ್ಕೆ ನಿಂತಿವೆ. ಕಟ್ಟಡ ಪೂರ್ಣಗೊಂಡಿದ್ದರೆ ವಿದ್ಯುತ್ ಸಂಪರ್ಕ ಮತ್ತು ನೀರಿನ ಪೂರೈಕೆ ಇಲ್ಲ. ಇದಕ್ಕೆ ಅಪೂರ್ಣ ಕ್ರಿಯಾಯೋಜನೆಯೇ ಕಾರಣ. ಆದ್ದರಿಂದ ಸಂಬಂಧಿತ ಇಲಾಖೆ ಅಧಿಕಾರಿಗಳು ಈ ಕುರಿತು ಗಮನ ಹರಿಸಬೇಕು. ತಾಲೂಕಿನಲ್ಲಿ ಕೆಲವೆಡೆ ಜೆಜೆಎಂ ಯೋಜನೆ ಸರಿಯಾಗಿ ಅನುಷ್ಠಾನಗೊಂಡಿಲ್ಲ. ಇದರಿಂದಾಗಿ ಗ್ರಾಮಸ್ಥರು ನೀರು ಬರುತ್ತಿಲ್ಲ ಎಂದು ಸಮಸ್ಯೆ ಹೇಳಿಕೊಳ್ಳುತ್ತಿದ್ದಾರೆ. ಈ ಕುರಿತು ಯಾವ ಕ್ರಮಕೈಗೊಂಡಿದ್ದೀರಿ ಎಂದು ಗ್ರಾಮೀಣ ಕುಡಿಯುವ ನೀರು ಪೂರೈಕೆ ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳನ್ನು ಪ್ರಶ್ನಿಸಿದರು.

ಇಲಾಖೆಯ ಎಇಇ ಮಲ್ಲಿಕಾರ್ಜುನ ಪಾಟೀಲ ಉತ್ತರಿಸಿ, ಅಪೂರ್ಣ ಕಾಮಗಾರಿ ಮಾಡಿರುವ ಗುತ್ತಿಗೆದಾರರಿಗೆ ಈಗಾಗಲೇ ಹಲವು ಬಾರಿ ನೋಟೀಸ್ ನೀಡಿದ್ದೇವೆ. ಅವರಿಂದ ಉತ್ತರ ಬರದಿದ್ದರೆ ಅಂಥಹ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಲು ಹಿರಿಯ ಅಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಿದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಮಾತನಾಡಿ, ಜೆಜೆಎಂ ಕಾಮಗಾರಿ ಯೋಜನೆಯಡಿ ಕೆಲಸ ಮಾಡಿರುವ ಗುತ್ತಿಗೆದಾರರಿಗೆ ಶೇ.50-60ರಷ್ಟು ಹಣ ಪಾವತಿ ಆಗಿದೆ. ಕೆಲಸ ಪೂರ್ಣ ಮಾಡಿದರೆ ಉಳಿದ ಹಣ ಪಾವತಿ ಮಾಡಲಾಗುವುದು. ಈ ಬಗ್ಗೆ ಗುತ್ತಿಗೆದಾರರಿಗೆ ಇಲಾಖೆಯಿಂದ ನೋಟೀಸ್ ನೀಡಲಾಗಿದೆ ಎಂದು ತಿಳಿಸಿದರು.

ಸಿಡಿಪಿಓ ಮೃತ್ಯುಂಜಯಪ್ಪ ಗುಡ್ಡದನ್ವೇರಿ, ಲೋಕೋಪಯೋಗಿ ಇಲಾಖೆಯ ಎಇಇ ಫಕ್ಕಿರೇಶ ತಿಮ್ಮಾಪುರ, ಸಹಾಯಕ ಕೃಷಿ ನಿರ್ದೇಶಕ ರೇವಣೆಪ್ಪ ಮನಗೂಳಿ, ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ಎಲ್ಲ ಇಲಾಖೆಗಳ ಅಧಿಕಾರಿಗಳು ತಮ್ಮ ಇಲಾಖೆಗಳ ಪ್ರಗತಿ ಕುರಿತು ಸಭೆಗೆ ಮಾಹಿತಿ ನೀಡಿದರು.

> 2025-26ನೇ ಸಾಲಿನಲ್ಲಿ ಆಯಾ ಇಲಾಖೆಗಳು ಕೈಗೊಳ್ಳಬೇಕಾದ ಕೆಲಸ ಕುರಿತು ಮುನ್ನೋಟ ಸಿದ್ಧಪಡಿಸಲು ಹಿರಿಯ ಅಧಿಕಾರಿಗಳು ಸೂಚಿಸಿದ್ದಾರೆ. ಅರಣ್ಯ ಇಲಾಖೆ ಹೊರತುಪಡಿಸಿ ಬೇರೆ ಇಲಾಖೆಯವರು ಇನ್ನೂ ತಮ್ಮ ಬೇಡಿಕೆ ಪಟ್ಟಿ ಕೊಟ್ಟಿಲ್ಲ. ಕಾರಣ ಸೆ.20ರ ಒಳಗಾಗಿ ತಮ್ಮ ಇಲಾಖೆಗಳ ಕೆಲಸಗಳ ಬೇಡಿಕೆ ಪಟ್ಟಿ ಸಿದ್ಧಪಡಿಸಿಕೊಡಬೇಕು ಎಂದು ಇಓ ಕೃಷ್ಣಪ್ಪ ಧರ್ಮರ ತಿಳಿಸಿದರು.

## ಕೋಡಿಕೊಪ್ಪ ಶಾಲೆಯಲ್ಲಿ ನೂತನ ಎಸ್‌ಡಿಎಂಸಿ ರಚನೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಕೋಡಿಕೊಪ್ಪದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನೂತನ ಎಸ್‌ಡಿಎಂಸಿಯನ್ನು ರಚಿಸಲಾಯಿತು ಎಂದು ಮುಖ್ಯೋಪಾಧ್ಯಾಯ ಸಂಗಯ್ಯ ಪ್ರಭುಸ್ವಾಮಿಮಠ ಹೇಳಿದರು.

ನೂತನ ಅಧ್ಯಕ್ಷರಾಗಿ ಹುಲಗಪ್ಪ ಬಂಡಿವಡ್ಡರ ಮತ್ತು ಉಪಾಧ್ಯಕ್ಷರಾಗಿ ರಾಧಾ ಬದಾಮಿ ಆಯ್ಕೆಯಾದರು. ಇನ್ನುಳಿದಂತೆ 16 ಜನ ಸದಸ್ಯರನ್ನು ಆಯ್ಕೆ ಮಾಡಲಾಗಿದೆ. ಆಯ್ಕೆಯಾದ ಅಧ್ಯಕ್ಷ ಹುಲಗಪ್ಪ ಬಂಡಿವಡ್ಡರ ಮತ್ತು ರಾಧಾ ಬದಾಮಿಯವರನ್ನು ಇತರೆ ಸದಸ್ಯರನ್ನು ಅಭಿನಂದಿಸಿ ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಮಾತನಾಡಿ, ಶಾಲೆಗೆ ಏನೇ ಭೌತಿಕ ಸೌಲಭ್ಯಗಳು ಬೇಕಾದರೂ ಸಂಬಂಧಿಸಿದವರ ಗಮನಕ್ಕೆ ತಂದು ಪೂರೈಸಲು ಸಿದ್ಧರಾಗಿರಬೇಕು. ಶಾಲಾ ಶೈಕ್ಷಣಿಕ ವಾತಾವರಣದ ಬಗ್ಗೆ, ಮಕ್ಕಳ ಕಲಿಕೆಯ ಪ್ರಗತಿಯ ಬಗ್ಗೆ ಗಮನವಿರಿಸಬೇಕು. ಒಟ್ಟಿನಲ್ಲಿ ನಮ್ಮೂರ ಶಾಲೆ ಎಲ್ಲರಿಂದಲೂ ಸೈ ಎನ್ನಿಸಿಕೊಳ್ಳುವಂತೆ ಕಾರ್ಯ ನಿರ್ವಹಿಸಬೇಕೆಂದರು.

ಶಿವಾನಂದ ಮಣ್ಣೊಡ್ಡರ, ನಾಗೇಶ ಮಣ್ಣೊಡ್ಡರ, ಮುತ್ತಣ್ಣ ಬಂಡಿವಡ್ಡರ, ಮೇಘಾ ಮಣ್ಣೊಡ್ಡರ, ರೇಖಾ ಹಾಲಕೇರಿ, ಸರೋಜಾ ಬಂಡಿವಡ್ಡರ, ಮಹಾಂತೇಶ ಕುರಡಗಿ, ಹುಸೇನಬಿ ಅಣ್ಣಿಗೇರಿ, ಗಂಗಾಧರ ಕಳಕವ್ವನವರ, ಶರಣಪ್ಪ ಮಡಿವಾಳರ, ಸಿದ್ದಯ್ಯ ಹೊಸೂರು, ವಿರೂಪಾಕ್ಷಪ್ಪ ಹಕ್ಕಿ, ಸಹನಾ ನಾಶಿಪುಡಿ, ಕಳಕವ್ವ ಹಿರೇಮಠ, ಭಾಗ್ಯಾ ಕುಂಬಾರ ಮತ್ತು ವೀರಮ್ಮ ಸಮಗಂಡಿ ಸದಸ್ಯರಾಗಿ ಆಯ್ಕೆಗೊಂಡರು.

ಈ ಸಂದರ್ಭದಲ್ಲಿ ಸೋಮಪ್ಪ ಹನುಮಸಾಗರ, ಬಸನಗೌಡ ಉದ್ದಣ್ಣವರ, ಬಿ.ಈ. ಹಳ್ಳೂರ, ನಿಂಗಪ್ಪ ಹೊನ್ನಾಪೂರ ಮುಂತಾದವರು ಉಪಸ್ಥಿತರಿದ್ದರು.



## ಹಿರಿಯ ಉಪಾಧ್ಯಕ್ಷರಾಗಿ ದುರ್ಗಣ್ಣವರ ನೇಮಕ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಘಟಕದ ಹಿರಿಯ ಉಪಾಧ್ಯಕ್ಷರಾಗಿ ಡಿ.ಎಸ್. ದುರಗಣ್ಣವರ ಅವರನ್ನು 2024- 2029ನೇ ಅವಧಿಗೆ ಜಿಲ್ಲಾಧ್ಯಕ್ಷ ಡಾ. ಬಸವರಾಜ್ ಬಳ್ಳಾರಿ ಅವರು ನೇಮಕ ಮಾಡಿ ಆದೇಶಿಸಿದ್ದಾರೆ.

ಡಿ.ಎಸ್.ದುರಗಣ್ಣವರ ಅವರು ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಗ್ರಂಥಪಾಲಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರು ರಾಜ್ಯ ಸರಕಾರಿ ನೌಕರರ ಸಂಘದಲ್ಲಿ ಸತತ ಮೂರನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಇವರನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ರಾಜ್ಯಾಧ್ಯಕ್ಷರಾದ ಸಿ. ಎಸ್. ಷಡಕ್ಷರಿ ಅವರು ಡಿ.ಎಸ್. ದುರಗಣ್ಣವರ ಅವರನ್ನು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ನಿಕಟ ಪೂರ್ವ ಅಧ್ಯಕ್ಷರಾದ ಡಾ. ರವಿ ಗುಂಜೀಕರ್, ಪ್ರೇಮನಾಥ ಗರಗ, ಜಿಲ್ಲಾಧ್ಯಕ್ಷರಾದ ಡಾ. ಬಸವರಾಜ ಬಳ್ಳಾರಿ, ಜಿಲ್ಲಾ ಕೋಶಾಧ್ಯಕ್ಷರಾದ ಎಂ.ಎಂ ನಿಟ್ಟಾಲಿ ಸೇರಿದಂತೆ ಮುಂತಾದವರು ಅಭಿನಂದಿಸಿದ್ದಾರೆ.

## ಶ್ರೇಷ್ಠ ಶಿಕ್ಷಕರಿಗೆ ಸನ್ಮಾನ




■ ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಕರು ಉತ್ತಮ ನಾಗರಿಕರನ್ನು ರೂಪಿಸುವಲ್ಲಿ, ಪಠ್ಯ-ಪುಸ್ತಕಗಳನ್ನು ಮೀರಿದ ಮೌಲ್ಯಗಳನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತಾರೆ ಎಂದು ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಯ ಅಧ್ಯಕ್ಷರಾದ ಅಶ್ವಿನಿ ಜಗತಾಪ ಹೇಳಿದರು.

ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಯ ನಡೆದ ಮಾಸಿಕ ಸಭೆಯಲ್ಲಿ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಿ ಶ್ರೇಷ್ಠ ಶಿಕ್ಷಕರಿಗೆ ಸನ್ಮಾನಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಶಿಕ್ಷಕರು ನೀಡಿದ ಜ್ಞಾನ ಉತ್ತಮ ಬದುಕನ್ನು ರೂಪಿಸುವುದಲ್ಲದೆ ಒಳ್ಳೆಯ ದಾರಿಯನ್ನು ತೋರಿ ಉತ್ತಮ ಪ್ರಜೆಗಳನ್ನಾಗಿ ರೂಪಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಸನ್ಮಾನ ಸ್ವೀಕರಿಸಿದರ ಸುಧಾ ಬೆನಕಲ್ ಮಾತನಾಡಿ, ಶಿಕ್ಷಕ ವೃತ್ತಿಯು ಶ್ರೇಷ್ಠವಾದ ವೃತ್ತಿ. ಶಿಕ್ಷಕರಾಗಿ ಕಾರ್ಯ ನಿರ್ವಹಿಸುವುದು ನಮ್ಮ ಸೌಭಾಗ್ಯ. ಇದಕ್ಕೆ ತಮ್ಮನ್ನು ಅಣಿ ಮಾಡಿದ ತಮ್ಮ ತಂದೆ-ತಾಯಿಯವರಿಗೂ ಹಾಗೂ ತಮ್ಮನ್ನು ಗುರುತಿಸಿ ಸನ್ಮಾನಿಸಿದ ಕ್ಲಬ್‌ನ ಸದಸ್ಯರಿಗೂ ಎಲ್ಲ ಶಿಕ್ಷಕರ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸಿದರು.

ಇನ್ನರ್ ವ್ಹೀಲ್ ಕ್ಲಬ್‌ನ ಕಾರ್ಯದರ್ಶಿ ಶಿವಲೀಲಾ ಅಕ್ಕಿ ಮಾತನಾಡಿ, ಶಿಕ್ಷಕರು ಕೇವಲ ಪುಸ್ತಕ ಜ್ಞಾನವನ್ನು ಮಾತ್ರವಲ್ಲದೆ ಮಕ್ಕಳಲ್ಲಿ ಕರುಣೆ, ವಾತ್ಸಲ್ಯ ಮತ್ತು ಸಾಮಾಜಿಕ ಮೌಲ್ಯಗಳನ್ನು ಬೆಳೆಸುತ್ತಾರೆ ಎಂದರು.

ಸಿಪಿಸಿಸಿ ಮೀನಾಕ್ಷಿ ಕೊರವನವರ ಸನ್ಮಾನಿತರಾದ ಶಿಕ್ಷಕರನ್ನು ಪರಿಚಯಿಸಿದರು. ಮಾಜಿ ಅಧ್ಯಕ್ಷರಾದ ಶಾಂತಾ ಮುಂದಿನಮನಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಇನ್ನರ್ ವ್ಹೀಲ್ ಕ್ಲಬ್‌ನ ಎಲ್ಲ ಸದಸ್ಯರು ಉಪಸ್ಥಿತರಿದ್ದರು.

## ಜಮೀನುಗಳಿಗೆ ನುಗ್ಗಿದ ಕೆರೆಯ ನೀರು



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ನೀಲಗುಂದ ಗ್ರಾಮದ ಕೆರೆ ಭರ್ತಿಯಾಗಿರುವ ಪರಿಣಾಮ ಕೆರೆಯ ನೀರು ತಾಳೇದಹಳ್ಳಿ ರೈತರ ಜಮೀನುಗಳಿಗೆ ನುಗ್ಗಿದ್ದು, 70 ಎಕರೆಗೂ ಅಧಿಕ ಬೆಳೆ ಜಲಾವೃತವಾಗಿದೆ.

ಕೆರೆ ಭರ್ತಿಯಾದಾಗ ನೀರು ರೈತರ ಜಮೀನುಗಳತ್ತ ನುಗ್ಗುತ್ತಿದೆ.

ಇದರಿಂದ ಮೆಕ್ಕೆಜೋಳ, ಮೆಣಸಿನಕಾಯಿ, ಅಡಿಕೆ, ಪಪ್ಪಾಯ, ಸೇವಂತಿಗೆ, ಟೊಮಾಟೋ ಬೆಳೆಗಳೆಲ್ಲವೂ ನೀರು ಪಾಲಾಗುತ್ತಿವೆ. ಕೆರೆ ನೀರು ಜಮೀನುಗಳಿಗೆ ನುಗ್ಗದೆ ಕೋಡಿ ಮೂಲಕ ಹೊರಗಡೆ ಹೋಗಲು ವ್ಯವಸ್ಥೆ ಕಲ್ಪಿಸಲು ಕೂಡಲೇ ಸಮೀಕ್ಷೆ ಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಸ್ಥಳಕ್ಕೆ ಭೇಟಿ ನೀಡಿ ಸೂಚಿಸಿದರು.

ಈ ವೇಳೆ ತಹಸೀಲ್ದಾರ್ ಬಿ.ವಿ. ಗಿರೀಶ್ ಬಾಬು, ಸಿಪಿಐ ಮಹಂತೇಶ್ ಸಜ್ಜನ್, ಪಿಎಸ್‌ಐ ಶಂಭುಲಿಂಗ ಎಸ್.ಹಿರೇಮಠ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ, ಕೆ. ಕುಬೇರಪ್ಪ, ನೀಲಗುಂದ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಹನುಮಂತಪ್ಪ ಸೇರಿದಂತೆ ಇತರರಿದ್ದರು.

## ಬಿಜೆಪಿ ಗದಗ ಗ್ರಾಮೀಣ ಮಂಡಲದ ಪ್ರಧಾನ ಕಾರ್ಯದರ್ಶಿಗಳ ನೇಮಕ





■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಕರ್ನಾಟಕ ರಾಜ್ಯಾಧ್ಯಕ್ಷ ಬಿ.ವಾಯ್. ವಿಜಯೇಂದ್ರ ಅವರ ಸೂಚನೆಯಂತೆ ಬಿಜೆಪಿ ಗದಗ ಜಿಲ್ಲೆಯ ಗದಗ ವಿಧಾನಸಭಾ ಕ್ಷೇತ್ರದ ಗದಗ ಗ್ರಾಮೀಣ ಮಂಡಲ ಪ್ರಧಾನ ಕಾರ್ಯದರ್ಶಿಯಾಗಿ ಯಲಿಶಿರೂರ ಗ್ರಾಮದ ಸುಭಾಸ ಸುಂಕದ, ಬೆಳದಡಿ ಗ್ರಾಮದ ಮಂಜುನಾಥ ಹಳ್ಳೂರಮಠ ಇವರನ್ನು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ ಎಂದು ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮದ್ದೂರಿನಲ್ಲಿ ಪ್ರಚೋದನಕಾರಿ ಭಾಷಣ: ಸಿ.ಟಿ ರವಿ ವಿರುದ್ಧ ಪ್ರಕರಣ ದಾಖಲು

■ ವಿಜಯಸಾಕ್ಷಿ ಸುದ್ದಿ, ಮಂಡ್ಯ

ಮಂಡ್ಯದ ಮದ್ದೂರು ಪಟ್ಟಣದಲ್ಲಿ ನಡೆದ ಗಣೇಶ ಮೂರ್ತಿ ವಿಸರ್ಜನೆ ಕಾರ್ಯಕ್ರಮದ ಸಂದರ್ಭದಲ್ಲಿ ಪ್ರಚೋದನಕಾರಿ ಭಾಷಣದ ಮಾಡಿದ ಆರೋಪದ ಮೇಲೆ ಬಿಜೆಪಿ ನಾಯಕ ಹಾಗೂ ವಿಧಾನಪರಿಷತ್ ಸದಸ್ಯ ಸಿ.ಟಿ ರವಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ವರದಿಯಾಗಿದೆ.



ಬುಧವಾರ (ಸೆ.10) ಮದ್ದೂರಿನಲ್ಲಿ ನಡೆದ ಸಾಮೂಹಿಕ ಗಣೇಶ ವಿಸರ್ಜನಾ ಕಾರ್ಯಕ್ರಮದಲ್ಲಿ ಹಿರಿಯ ಬಿಜೆಪಿ ನಾಯಕರು ಭಾಗವಹಿಸಿದ್ದಾಗ ಸಿಟಿ ರವಿ ಹೇಳಿಕೆ ನೀಡಿದ್ದರು. ಸೆಪ್ಟೆಂಬರ್ 7ರಂದು ಗಣೇಶ ಮೆರವಣಿಗೆಯ ಸಂದರ್ಭದಲ್ಲಿ ಕಲ್ಲು ತೂರಾಟ ನಡೆದ ಹಿನ್ನೆಲೆಯಲ್ಲಿ ಬುಧವಾರ ಸಾಮೂಹಿಕ ಗಣೇಶ ವಿಸರ್ಜನೆ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ಬಿಜೆಪಿ ನಾಯಕರು ಪಾಲ್ಗೊಂಡಿದ್ದರು. ಕಾರ್ಯಕ್ರಮ ಒಂದು ರೀತಿ ಹಿಂದುತ್ವ ಗುಂಪುಗಳ ಶಕ್ತಿ ಪ್ರದರ್ಶನವಾಗಿ ಬದಲಾಗಿತ್ತು.

ಸಿಟಿ ರವಿ ತಮ್ಮ ಭಾಷಣದಲ್ಲಿ ಅಲ್ಪಸಂಖ್ಯಾತ ಸಮುದಾಯವನ್ನು (ಮುಸ್ಲಿಮರನ್ನು) ಗುರಿಯಾಗಿಸಿಕೊಂಡು ಪ್ರಚೋದನಕಾರಿ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸ್ ಅಧಿಕಾರಿಯೊಬ್ಬರ ದೂರಿನ ಮೇರೆಗೆ, ಮದ್ದೂರು ಪೊಲೀಸರು ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 196(1)(ಎ) (ಧಾರ್ಮಿಕ ಅಥವಾ ಇತರ ಆಧಾರದ ಮೇಲೆ ಗುಂಪುಗಳ ನಡುವೆ ದ್ವೇಷವನ್ನು ಉತ್ತೇಜಿಸುವುದು) ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ ಎಂದು ಮಾಹಿತಿ ದೊರೆತಿದೆ.

# ಸೈಕಲ್ ಜಾಥಾಗೆ ನೋಂದಣಿ ಪ್ರಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಸೆಪ್ಟೆಂಬರ್ 15ರಂದು ಆಚರಿಸಲಾಗುತ್ತಿದ್ದು, ದಿನಾಚರಣೆಯ ನಿಮಿತ್ತ ಜಿಲ್ಲಾಧಿಕಾರಿಗಳು, ಸೆಪ್ಟೆಂಬರ್ 15ರಂದು ಬೆಳಿಗ್ಗೆ 6.30 ಗಂಟೆಗೆ ಬಸವೇಶ್ವರ ಸರ್ಕಲ್ ನಿಂದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದ ವರೆಗೆ ಸೈಕಲ್ ಜಾಥವನ್ನು ಹಮ್ಮಿಕೊಳ್ಳಲು ಸೂಚಿಸಿದ್ದಾರೆ.

ಸೈಕಲ್ ಜಾಥಾದಲ್ಲಿ ಭಾಗವಹಿಸಲು 14 ವರ್ಷ ಮೇಲ್ಪಟ್ಟ ಪುರುಷರು ಮಹಿಳೆಯರು ಸಾರ್ವಜನಿಕರು ವಿದ್ಯಾರ್ಥಿಗಳು ಹಾಗೂ ಸರ್ಕಾರಿ ಅಧಿಕಾರಿಗಳು ಸಿಬ್ಬಂದಿಗಳು ಸೇರಿದಂತೆ ಎಲ್ಲರೂ ಭಾಗವಹಿಸಬಹುದಾಗಿದ್ದು, ಸೈಕಲ್ ಜಾಥಾದಲ್ಲಿ ಭಾಗವಹಿಸುವವರು https://forms.gle/V73qVTmaX9cB1m7t8 ಈ ಲಿಂಕ್ ಮೂಲಕ ಸೆಪ್ಟೆಂಬರ್ 13ರ ಸಂಜೆ 5 ಗಂಟೆಯೊಳಗೆ ನೋಂದಾಯಿಸಿ ಕೊಳ್ಳಬಹುದಾಗಿದೆ.

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ಭಾಗವಹಿಸಿ "ನನ್ನ ಮತ ನನ್ನ ಹಕ್ಕು" ಎಂಬ ಮಹತ್ವದ ಆಶಯದೊಂದಿಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಎಂದು ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಗದಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಧಿಕಾರಿಗಳ ಗಮನಕ್ಕೆ ದಿ.15-09-2025 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಜಿಲ್ಲಾಧಿಕಾರಿಗಳ ಆಡಿಟೋರಿಯಮ್ ಹಾಲ್‌ನಲ್ಲಿ ಬೆಳಿಗ್ಗೆ 10 ಗಂಟೆಗೆ ಆಚರಿಸಲಾಗುತ್ತಿದೆ.

ಕಾರ್ಯಕ್ರಮಕ್ಕೆ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು, ಗದಗ ತಾಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ವರ್ಗಗಳ, ಪರಿಶಿಷ್ಟ ಜಾತಿಗಳ ಹಿಂದುಳಿದ ವರ್ಗಗಳ ಅಲ್ಪಸಂಖ್ಯಾತ ವರ್ಗಗಳ ಮುಖಂಡರು ಹಾಗೂ ಸರ್ವ ಸದಸ್ಯರು, ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ದಿ. 15-09-2025 ರಂದು ನಡೆಯುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ಕಾರ್ಯಕ್ರಮಕ್ಕೆ ಆಗಮಿಸಬೇಕೆಂದು ಕೋರಿದೆ.

**ಅಂಚೆ ಮಹಾ ಉದ್ಯಮ ಸಪ್ತಾಹಕ್ಕೆ ಚಾಲನೆ ನೀಡಿದ ಅಂಚೆ ಅಧೀಕ್ಷಕ ರಮೇಶ ಮಡಿವಾಳರ**

# ಸಾಮಾನ್ಯ ಗ್ರಾಹಕರಿಗೂ ವಿವಿಧ ಅಂಚೆ ಸೇವೆ

■ವಿಜಯಸಾಕ್ಷಿ ಸುದ್ದಿ, ಗದಗ



ಅಂಚೆ ಇಲಾಖೆ ತನ್ನ ಮೂಲ ಉದ್ಯಮ ಸೇವೆ ವಿಸ್ತರಿಸಿ ಮಹಾ ಉದ್ಯಮ ಸಪ್ತಾಹದ ಅಂಗವಾಗಿ ಗದಗ ವಿಭಾಗೀಯದಲ್ಲಿ ಸೆ.15ರಿಂದ 20ವರೆಗೆ ವಿಶೇಷ ಅಂಚೆ ಮಹಾ ಉದ್ಯಮ ಸಪ್ತಾಹ ಆಯೋಜಿಸಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಹೇಳಿದರು.

ಗದಗ ಪ್ರಧಾನ ಅಂಚೆ ಕಚೇರಿಯಲ್ಲಿ ಬುಧವಾರ ನಡೆದ ಮಹಾ ಉದ್ಯಮ ಸಪ್ತಾಹ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ಅಭಿಯಾನದಲ್ಲಿ ಜಿಲ್ಲೆಯ ಬ್ಯಾಂಕಿಂಗ್, ಗುಡಿ ಕೈಗಾರಿಕೆ, ಸಣ್ಣ ಉದ್ಯಮ, ಹಣುಕಾಸು ಸಂಸ್ಥೆಗಳು, ಸರಕಾರ ಸಂಘ-ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ವಿವಿಧ ಉತ್ಪನ್ನಗಳಿಗೆ, ಇ-ಕಾಮರ್ಸ್ ಮಾರಾಟಗಾರರು ಸೇರಿದಂತೆ ಸಾಮಾನ್ಯ ಗ್ರಾಹಕರಿಗೂ ವಿವಿಧ ಅಂಚೆ ಸೇವೆಗಳನ್ನು ಪರಿಚಯಿಲಾಗುತ್ತಿದೆ ಎಂದರು.

ಸಪ್ತಾಹದ ವೇಳೆಯಲ್ಲಿ ಗ್ರಾಹಕರಿಗೆ ಸ್ಪೀಡ್ ಪೋಸ್ಟ್, ಪಾರ್ಸಲ್, ಸಿಓಡಿ (ಅಔಳ) ಸೇವೆಗಳ ಪ್ರಚಾರದ ಜೊತೆ-ಗೆ ಹೊಸ ಗ್ರಾಹಕರನ್ನು ಅಂಚೆ ಇಲಾಖೆಯ ವ್ಯಾಪ್ತಿಗೆ ತರಲಾಗುತ್ತದೆ. ಸರಕಾರಿ ಹಾಗೂ ಖಾಸಗಿ ಸಂಸ್ಥೆಗಳೊಂದಿಗೆ ಹೊಸ ಒಪ್ಪಂದದ ಮೂಲಕ ಸ್ಥಳೀಯ ಉತ್ಪನ್ನಗಳನ್ನು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಾರುಕಟ್ಟೆಗೂ ತಲುಪಿಸುವ ಅವಕಾಶಗಳ ಬಗ್ಗೆ ಗ್ರಾಹಕರಿಗೆ ತಿಳುವಳಿಕೆ ಮೂಡಿಸಿ, ಅವಕಾಶ ಕಲ್ಪಿಸಲಾಗುತ್ತದೆ. ವರ್ಷದ 12 ತಿಂಗಳ ಕಾಲವೂ ದೇಶದ ಕಟ್ಟಕಡೆಯ ವ್ಯಕ್ತಿಗೂ ಅಂಚೆ ಸೇವೆ ನೀಡುವ ಉನ್ನತ ತಂತ್ರಜ್ಞಾನದ ಜೊತೆಗೆ ಅಪಾರ ಪ್ರಮಾಣದ ಮಾನವ ಸಂಪನ್ಮೂಲ, ಅತ್ಯಂತ ದೊಡ್ಡದಾದ ಸಂಪರ್ಕ ಜಾಲ ಅಂಚೆ ಇಲಾಖೆ ಹೊಂದಿದೆ ಎಂದರು.

ಗದಗ ಉಪ ವಿಭಾಗದ ಸಹಾಯಕ ಅಂಚೆ ಅಧೀಕ್ಷಕ ಶ್ರೀಕಾಂತ ಜಾಧವ ಮಾತನಾಡಿ, ಈ ಅಭಿಯಾನದಿಂದ ಗ್ರಾಹಕರು ಹಲವು ರೀತಿಯ ಪ್ರಯೋಜನಗಳನ್ನು ಪಡೆಯುತ್ತಾರೆ. ದಾಖಲೆಗಳು, ಪಾರ್ಸಲ್‌ಗಳು ವೇಗವಾ, ವಿಶ್ವಾಸಾರ್ಹವಾಗಿ ನಂಬಿಕೆಯೊಂದಿಗೆ ಗ್ರಾಹಕರ ನಿರೀಕ್ಷೆ ತಕ್ಕಂತೆ ಸೇವೆ ನೀಡುವದರಿಂದ ಗ್ರಾಹಕರು ತಮ್ಮ ದಿನನಿತ್ಯದ ಅಗತ್ಯಗಳಿಗೆ ಅಂಚೆ ಇಲಾಖೆ ಸೇವೆಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದರು.

ಅಂಚೆ ಇಲಾಖೆ ಗದಗ ಮಾರುಕಟ್ಟೆ ವ್ಯವಸ್ಥಾಪಕ ವೆಂಕಟೇಶ ಆಕಳವಾಡಿ ಮಾತನಾಡಿ, ಅಂಚೆ ಇಲಾಖೆ ಮನೆ ಬಾಗಿಲಿಗೆ ಬಂದು ಪಾರ್ಸಲ್, ಸ್ಪೀಡ್ ಪೋಸ್ಟ್ ಬುಕಿಂಗ್ ಜೊತೆಗೆ ವ್ಯಾಪಾರ ವಹಿವಾಟು ಉತ್ತೇಜನ ಕಲ್ಪಿಸುವ ಸಲುವಾಗಿ ಕಡಿಮೆ ಸೇವಾ ಶುಲ್ಕದಲ್ಲಿ ವಿವಿಧ ಸೇವೆ ನೀಡಲಾಗುತ್ತದೆ. ಗ್ರಾಹಕರು ಈ ಸೇವೆಗಳ ಸದ್ಬಳಕೆಗೆ ಮಾಡಿಕೊಳ್ಳಬೇಕು ಎಂದರು.

ಪ್ರಧಾನ ಅಂಚೆ ಪಾಲಕರಾದ ಮಂಜುಳಾ ದೇಗಿನಾಳ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಗದಗ ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕ ವಿ. ಸುನೀಲಕುಮಾರ ಮತ್ತಿತರು ಪಾಲ್ಗೊಂಡಿದ್ದರು. ನಿಂಗಪ್ಪ ಹೂಗಾರ ನಿರೂಪಿಸಿ, ವಂದಿಸಿದರು.

ರೋಣ ಉಪ ವಿಭಾಗದ ಸಹಾಯಕ ನಿರೀಕ್ಷಕ ವೆಂಕಟೇಶರಡ್ಡಿ ಕೊಳ್ಳಿ ಪ್ರಾಸ್ತವಿಕವಾಗಿ ಮಾತನಾಡಿ, ಸ್ಥಳೀಯ ವಿವಿಧ ಉತ್ಪನ್ನಗಳಿಗೆ ದೇಶದ ಎಲ್ಲೆಡೆ ಮಾರುಕಟ್ಟೆ ತಲುಪಲು ಸುಲಭವಾಗಿಸಲಿದೆ. ಸರ್ಕಾರಿ ಮತ್ತು ಖಾಸಗಿ ಸಂಘ-ಸಂಸ್ಥೆಗಳಿಗೆ ತ್ವರಿತ ಮತ್ತು ತಂತ್ರಜ್ಞಾನ ಆಧಾರಿತವಾಗಿಯೇ ವಿವಿಧ ಗ್ರಾಹಕರಿಗೆ ರಿಯಾಯಿತಿ ದರದಲ್ಲಿ ಸೇವೆ ನೀಡಲಾಗುತ್ತದೆ. ಹಾಗಾಗಿ ಪ್ರತಿಯೊಬ್ಬ ಗ್ರಾಹಕರು ಈ ಅಂಚೆ ಮಹಾ ಉದ್ಯಮ ಮೇಳದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

# ವಿಶ್ವ ಸ್ಕಿಝೋಫ್ರೀನಿಯಾ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ಕಿಝೋಫ್ರೀನಿಯಾದಿಂದ ಬಳಲುತ್ತಿರುವ ರೋಗಿಗಳಿಗೆ ಉತ್ತಮ ಆರೈಕೆ, ಮನೋ ಸಾಮಾಜಿಕ ಬೆಂಬಲ, ಚಿಕಿತ್ಸೆ ನೀಡಿದಲ್ಲಿ ಅವರು ಸಾಮಾನ್ಯರಂತೆ ಜೀವನ ನಡೆಸಬಹುದು. ಸ್ಕಿಝೋಫ್ರೀನಿಯಾ ಖಾಯಿಲೆಗೆ ಸಂಬಂಧಿಸಿ ಸಮಾಜದಲ್ಲಿರುವ ಮೂಢನಂಬಿಕೆ ಹಾಗೂ ತಾರತಮ್ಯಗಳನ್ನು ಎಲ್ಲರೂ ಒಗ್ಗೂಡಿ ಹೋಗಲಾಡಿಸಬೇಕೆಂದು ಜಿಲ್ಲಾ ಕುಷ್ಠರೋಗ ನಿಯಂತ್ರಣ ಅಧಿಕಾರಿ ಡಾ. ರಾಜೇಂದ್ರ ಸಿ.ಬಸರಿಗಿಡದ ಕರೆ ನೀಡಿದರು.

ಜಿಲ್ಲಾಡಳಿತ ಗದಗ, ಜಿಲ್ಲಾ ಪಂಚಾಯಿತಿ ಗದಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಾಕ್ರಮ ವಿಭಾಗ ಗದಗ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಗದಗ ಹಾಗೂ ಸಂಕನೂರು ಶುಶ್ರೂಷ ವಿಜ್ಞಾನ ಸಂಸ್ಥೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಸಂಕನೂರು ಶುಶ್ರೂಷ ವಿಜ್ಞಾನ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ವಿಶ್ವ ಸ್ಕಿಝೋಫ್ರೀನಿಯಾ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಶ್ಮಿ ಪಾಟೀಲ್ ಮಾತನಾಡಿ, ವಿದ್ಯಾರ್ಥಿಗಳಿಗೆ ಸ್ಕಿಝೋಫ್ರೀನಿಯಾ ಖಾಯಿಲೆ ಮತ್ತು ಚಿಕಿತ್ಸೆ ಕುರಿತು ಸಮಾಜದಲ್ಲಿ ಅರಿವು ಮೂಡಿಸಲು ತಿಳಿಸಿದರು. ತಾಲೂಕಾ ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ ಮಾತನಾಡಿ, ಚಿಕಿತ್ಸೆಗಳ ಬಗ್ಗೆ ವಿವರಿಸಿದರಲ್ಲದೆ, ಮಾನಸಿಕ ಅಸ್ವಸ್ಥರಿಗೆ ಸಮಾಜದ ಕಾಳಜಿ ಅತ್ಯವಶ್ಯವಾಗಿದೆ. ಭಾರತ ಸರ್ಕಾರವು ಪ್ರಾರಂಭಿಸಿರುವ ಟೆಲಿ-ಮನಸ್ ಉಚಿತ ಸಹಾಯವಾಣಿ ಸಂಖ್ಯೆ-14416ಗೆ ಕರೆ ಮಾಡಿ ಆಪ್ತ ಸಮಾಲೋಚನೆ ಸೇವೆ ಪಡೆಯಬಹುದು ಎಂದು ತಿಳಿಸಿದರು.

ಅತಿಥಿಗಳಾಗಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಉಪಸ್ಥಿತರಿದ್ದರು. ನವೀನಪೌಲ ಗೌಡರ ಸ್ವಾಗತಿಸಿದರು. ರಾಜೇಶ್ವರಿ ಟಿ ಕಾರ್ಯಕ್ರಮ ನಿರೂಪಿಸಿದರು. ಮಧು ರೋಣದ ವಂದಿಸಿದರು. ಕಾರ್ಯಕ್ರಮದಲ್ಲಿ ಸಂಕನೂರು ಶುಶ್ರೂಷ ವಿಜ್ಞಾನ ಸಂಸ್ಥೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಾರ್ಯಾಲಯದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಪ್ರವಾದಿಯವರ ಸಂದೇಶ ಎಂದಿಗೂ ಪ್ರಸ್ತುತ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಾಟನ್ ಮಾರ್ಕೆಟ್ ರಸ್ತೆಯಲ್ಲಿರುಬ ಕಾರ್ಮಿಕ ಕಲ್ಯಾಣ ಸಂಸ್ಥೆಯ ಕಾರ್ಯಾಲಯದಲ್ಲಿ ವತಿಯಿಂದ ಪ್ರವಾದಿ ಮುಹಮ್ಮದ್ ಪೈಗಂಬರರ ಜಯಂತಿ ಹಾಗೂ ಶಿಕ್ಷಕರ ದಿನಾಚರಣೆ ಆಚರಿಸಲಾಯಿತು.




ಜಮಾತೆ ಇಸ್ಲಾಮಿಯ ಹಿಂದ್ ಗದಗ್ ಜಿಲ್ಲಾಧ್ಯಕ್ಷ ಕೆ.ಐ. ಶೇಖ್‌ಖ್ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೈವಿಕ ಸಂದೇಶವಾಹಕರಾದ ಪ್ರವಾದಿ ಮುಹಮ್ಮದ್ ಸಲ್ಲಲ್ಲಾಹು ಅಲೈಹಿ ವ ಸಲ್ಲಮರವರ ಜೀವನ ಮತ್ತು ಸಂದೇಶ ಎಂದೆಂದಿಗೂ ಪ್ರಸ್ತುತ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಶಾಂತಿ ಪ್ರಕಾಶನದಿಂದ ಪ್ರಕಟವಾದ ಪ್ರವಾದಿಗಳ ಕುರಿತಾದ ಪುಸ್ತಕವನ್ನು ಬಿಡುಗಡೆಗೊಳಿಸಿದರು. ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾದ ಎಸ್.ಹೆಚ್. ಶೆಟ್ಟಿನಾಯಕರ, ಬೆಳದಡಿ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಭೋಜರಾಜ್ ಹಡಪದರನ್ನು ಸನ್ಮಾನಿಸಲಾಯಿತು.

ಸಮಾರಂಭದ ಅಧ್ಯಕ್ಷತೆಯನ್ನು ಮಹಮ್ಮದ ಇರ್ಫಾನ ಡಂಬಳ ವಹಿಸಿದ್ದರು. ವಿದ್ಯಾರ್ಥಿಗಳಾದ ರಾಫಿಯ, ಹಾಜಿರಾ, ಫೈಜಾ ಕುರಾನ್ ಗ್ರಂಥ ಪಠಣ ಮಾಡಿದರು. ಕಾರ್ಮಿಕ ಕಲ್ಯಾಣ ಸಂಸ್ಥೆಯ ಗೌರವಾಧ್ಯಕ್ಷ ಝುಡ್.ಡಿ. ಬೇಲೇರಿ ಸ್ವಾಗತಿಸಿದರು. ನಿಂಗಪ್ಪ ಕಟ್ಟಿಮನಿ ಅತಿಥಿಗಳನ್ನು ಪರಿಚಯಿಸಿದರು. ಕಾರ್ಮಿಕ ಕಲ್ಯಾಣ ಸಂಸ್ಥೆಯ ಕಾರ್ಯಾಧ್ಯಕ್ಷ ನಾಸಿರ್ ಚಿಕೇನಕೊಪ್ಪ ಕಾರ್ಯಕ್ರಮ ನಿರೂಪಿಸಿದರು. ಖಾಜಾಸಾಬ್ ಗಬ್ಬೂರ ವಂದಿಸಿದರು.

ಭೀಮಪ್ಪ ಪೂಜಾರ, ಈಶಪ್ಪ ಬಳ್ಳಾರಿ, ಶಂಕರಗೌಡ ಭರಮಗೌಡ್ರ, ಮೊಹಮ್ಮದ್ ಯೂಸುಫ್ ಬೇಪಾರಿ, ಮುನ್ನಾ ಕಲ್ಮನಿ, ಮುಳುಗುಂದ ಉದಯ್, ಮೊಹಮ್ಮದ್‌ಶಫಿ ಸಿದ್ಧಿ, ಮೌಲಾಸಾಬ್ ಸದರಬಾವಿ, ವಸಂತ ದೇವದುರ್ಗ, ಮೆಹಬೂಬ್, ಲೀಲಾವತಿ ಶೆಟ್ಟಿನಾಯಕರ, ಮುಜಮ್ಮಿಲ್ಲ ಬಳ್ಳಾರಿ, ದಾವಲ್‌ಸಾಬ್ ಇರಕಲ್, ಅಪ್ಪಿ ತಾಡಪತ್ರಿ, ಅಶ್ರಫ್ ಶಿರಹಟ್ಟಿ, ಖಾದರ್‌ಭಾಷಾ ನವಲಗುಂದ್, ನಜೀರ್ ಬಳ್ಳಾರಿ, ಏಕನಾಥ್ ವಾಲ್ಮೀಕಿ, ರಮೇಶ್ ವಾಲ್ಮೀಕಿ, ಈಶ್ವರ್ ಲಕ್ಷ್ಮೇಶ್ವರ, ಇಮಾಮ ಕದಡಿ, ಇಬ್ರಾಹಿಂ ಹಳ್ಳಿಕೇರಿ ಮುಂತಾದವರು ಭಾಗವಹಿಸಿದ್ದರು.

# ಶ್ರೀ ಅನ್ನದಾನೇಶ್ವರ ಪ್ರೌಢಶಾಲೆ ವೀರಾಗ್ರಣಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಅಬ್ಬಿಗೆರೆ ಶ್ರೀ ಅನ್ನದಾನ ವಿಜಯ ಪ್ರೌಢಶಾಲೆಯಲ್ಲಿ ನರೇಗಲ್ಲ ವಲಯ ಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟ ಜರುಗಿತು. ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯ ಸಮಗ್ರ ವೀರಾಗ್ರಣಿ ಪ್ರಶಸ್ತಿಯನ್ನು ಪಡೆದುಕೊಂಡಿತು.

ಬಾಲಕರ ವಿಭಾಗದಲ್ಲಿ ಪುಟ್ಟರಾಜ ತಳವಾರ 200 ಮೀ ಮತ್ತು 400 ಮೀ. ಓಟದಲ್ಲಿ ಪ್ರಥಮ, ನಾಗರಾಜ ಕಮ್ಮಾರ 200 ಮೀ ಓಟದಲ್ಲಿ ದ್ವಿತೀಯ, ಪ್ರತಾಪ ಬಂಡಿಹಾಳ 800 ಮೀ ಓಟದಲ್ಲಿ ಬಹುಮಾನ ಪಡೆದರೆ, ಪೃಥ್ವಿಕುಮಾರ ಚವಡಿ ಎತ್ತರ ಜಿಗಿತದಲ್ಲಿ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಬಾಲಕಿಯರ ವಿಭಾಗದ 1500 ಮೀ ಮತ್ತು 3000 ಮೀ ಓಟದಲ್ಲಿ ಲಕ್ಷ್ಮಿ ತಳವಗೇರಿ ಪ್ರಥಮ, 800 ಮೀ ಓಟದಲ್ಲಿ ರೇಣುಕಾ ಕಂಠೆಣ್ಣವರ ಪ್ರಥಮ, 200 ಮೀ ಓಟದಲ್ಲಿ ಐಶ್ವರ್ಯ ದುತ್ತಾರಿ ದ್ವಿತೀಯ, 1500 ಮೀ ಓಟದಲ್ಲಿ ತ್ರಿವೇಣಿ ತಲ್ಲೂರ ದ್ವಿತೀಯ, ಸಂಗೀತಾ ಮೂಲಿಮನಿ ಎತ್ತರ ಜಿಗಿತದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ ಎಂದು ಮುಖ್ಯ ಶಿಕ್ಷಕ ಎಂ.ವಿ. ವೀರಾಪೂರ ತಿಳಿಸಿದ್ದಾರೆ. ಬಾಲಕರ ವಿಭಾಗದಲ್ಲಿ ಪುಟ್ಟರಾಜ ತಳವಾರ ವೈಯಕ್ತಿಕ ವೀರಾಗ್ರಣಿ ಮತ್ತು ಬಾಲಕಿಯರ ವಿಭಾಗದಲ್ಲಿ ಲಕ್ಷ್ಮೀ ತಳವಗೇರಿ ವೈಯಕ್ತಿಕ ವೀರಾಗ್ರಣಿ ಪ್ರಶಸ್ತಿಯನ್ನು ಪಡೆದುಕೊಂಡು ಶಾಲೆಗೆ ಕೀರ್ತಿ ತಂದಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಸೆ.15ರಿಂದ ಲಿಂಗತ್ವ ಅಲ್ಪಸಂಖ್ಯಾತರ, ದೇವದಾಸಿ ಮಹಿಳೆಯರ ಮರು ಸಮೀಕ್ಷೆ



■ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗತ್ವ ಅಲ್ಪಸಂಖ್ಯಾತರ (ಟ್ರಾನ್ಸ್‌ಜಂಡರ್) ಮತ್ತು ದೇವದಾಸಿ ಮಹಿಳೆಯರ ಮರು ಸಮೀಕ್ಷೆ ಸೆಪ್ಟೆಂಬರ್ 15ರಿಂದ 45 ದಿನಗಳ ಕಾಲ ರಾಜ್ಯಾದ್ಯಂತ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪ್ರಾರಂಭವಾಗುತ್ತಿದ್ದು, ಜಿಲ್ಲೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಪೋಸ್ಟರ್ ಬಿಡುಗಡೆ ಮಾಡುವದರ ಮೂಲಕ ಸಮೀಕ್ಷೆ ಕಾರ್ಯಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪದ್ಮಾವತಿ ಜಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅನುಪಮಾ ಅಂಗಡಿ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಭಿವೃದ್ಧಿ ನಿರೀಕ್ಷಕರಾದ ದಾಕ್ಷಾಯಣಿ ಪಾಟೀಲ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ, ಇಲಾಖಾ ಸಿಬ್ಬಂದಿಗಳು ಹಾಗೂ ಸಮುದಾಯ ಆಧಾರಿತ ಸಂಸ್ಥೆಯವರು ಭಾಗವಹಿಸಿದ್ದರು.

ಲಿಂಗತ್ವ ಅಲ್ಪಸಂಖ್ಯಾತರ (ಟ್ರಾನ್ಸ್‌ಜೆಂಟರ್) ಮತ್ತು ದೇವದಾಸಿ ಮರು ಸಮೀಕ್ಷೆಯಲ್ಲಿ ದೇವದಾಸಿ ಮಹಿಳೆಯರ ಸಮೀಕ್ಷೆಯನ್ನು ತಾಲೂಕಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಯನ್ನು ತಾಲೂಕು ಆಸ್ಪತ್ರೆಗಳಲ್ಲಿ ನಡೆಸಲಾಗುತ್ತಿದೆ.

ದೇವದಾಸಿ ಮಹಿಳೆಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರು ನಿಗದಿಪಡಿಸಿದ ಅವಧಿಯೊಳಗಾಗಿ ನಿಗದಿಪಡಿಸಿದ ಸ್ಥಳಗಳಲ್ಲಿ ಸಮೀಕ್ಷೆಯಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು ಹಾಗೂ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವನ್ನು ಸಂಪರ್ಕಿಸಬಹುದಾಗಿದೆ.

ಕರ್ನಾಟಕ ಸರ್ಕಾರ
**ಕಾರ್ಯನಿರ್ವಾಹಕ ಅಭಿಯಂತರರು**
**ಲೋಕೋಪಯೋಗಿ ಇಲಾಖೆ ಗದಗ ವಿಭಾಗ ಗದಗ**
**Phone No : 08372-238782 Fax No. 08372-237268**
**E.Mail : eepwdgad@gmail.com**
ನಂ:ಕಾನಿಇಂಗಃಲೋಇ:ಪಿಬಿ-1,2,3, :ವಿವಿಧ: 2025-26/2339
ದಿನಾಂಕ : 11/09/2025

**ಟೆಂಡರ್ ಪ್ರಕಟಣೆ**

ಕರ್ನಾಟಕ ರಾಜ್ಯಪಾಲರ ಪರವಾಗಿ ಈ ಕೆಳಗೆ ಸಹಿ ಮಾಡಿದ ಅಧಿಕಾರಿಯವರಿಂದ ಲೋಕೋಪಯೋಗಿ ಇಲಾಖೆ ಗದಗ ವಿಭಾಗದಡಿ ವಿವಿಧ ಲೆಕ್ಕ ಶೀರ್ಷಿಕೆ ಅನುದಾನದ ಅಡಿಯಲ್ಲಿಯ ಒಟ್ಟು **69.06** ಲಕ್ಷ ಮೊತ್ತದಲ್ಲಿ ಒಟು **09** ಕಾಮಗಾರಿಗೆ (ಕನಿಷ್ಟ ಮೊತ್ತ ರೂ. **3.00** ಲಕ್ಷ ಹಾಗೂ ಗರಿಷ್ಟ ಮೊತ್ತ ರೂ. **27.10** ಲಕ್ಷ) ಕೆಪಿಪಿಪಿ **(kppp)** ನಲ್ಲಿ ನೊಂದಣಿ ಮಾಡಿಸಿದ ಲೋಕೋಪಯೋಗಿ ಇಲಾಖೆಯ ಅರ್ಹ ಗುತ್ತಿಗೆದಾರರಿಂದ ಕೆಪಿಪಿಪಿ **(kppp )** ಸ್ಟಾಂಡರ್ಡ ಬಿಡ್ ಡಾಕುಮೆಂಟ್ ಕೆ ಡಬ್ಲ್ಯೂ-1, ಮತ್ತು 2 ರ ಪ್ರಕಾರ ಐಟಂವಾರು ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಸಂಪೂರ್ಣ ವಿವರಗಳಿಗಾಗಿ ಅಂತರ್ ಜಾಲ ವಿಳಾಸ : **http://www.kppp.Karnataka.gov.in/** ದಲ್ಲಿ ನೋಡಿಕೊಳ್ಳಬಹುದು.

**Work Indent No** : 21562/Call-3, 22505, 22500, 27695-SC, 23901-Category 2A, 23977, 23816 and 24003

ಮೇಲಿನ ಕಾಮಗಾರಿಗಳ ಟೆಂಡರ ವಿವರ ಪ್ರಶ್ನೋತ್ತರ ದಿನಾಂಕ : **29-09-2025** ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : **03-10-2025** ಮಧ್ಯಾಹ್ನ 4.00 ಘಂಟೆಯ ವರೆಗೆ , ತಾಂತ್ರಿಕ/ಆರ್ಥಿಕ ಬಿಡ್ ತೆರೆಯುವ ದಿನಾಂಕ : **04-10-2025**

ವರ್ಕ ಇಂಡೆಂಟ್ ನಂ : **SE0176/Call-2 Consultancy service(KC-7)** ಟೆಂಡರ ವಿವರ ಪೂರ್ವಭಾವಿ ಹಾಗೂ ಪ್ರಶ್ನೋತ್ತರ ದಿನಾಂಕ : **15-09-2025** ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : **19-09-2025** ಮಧ್ಯಾಹ್ನ 4.00 ಘಂಟೆಯ ವರೆಗೆ , ತಾಂತ್ರಿಕ/ ಆರ್ಥಿಕ ಬಿಡ್ ತೆರೆಯುವ ದಿನಾಂಕ : **20-09-2025**

ಪರಿಶಿಷ್ಟ ಜಾತಿ ಹಾಗೂ ಕೆಟಗರಿ-2ಎ ಕ್ಕೆ ಮೀಸಲಿರಿಸಿದ ಕಾಮಗಾರಿಗಳ ಟೆಂಡರ್‌ಗಳಲ್ಲಿ ಭಾಗವಹಿಸುವ ಗುತ್ತಿಗೆದಾರರು ಕಡ್ಡಾಯವಾಗಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪೂರಕ ದಾಖಲೆಗಳಾದ ಜಾತಿ ಪ್ರಮಾಣ ಪತ್ರ , 10 ವರ್ಷದ ರಹವಾಸಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

GST shall be paid separately as per prevailing Government Order. The increase in GST shall not be paid in the extended period of contract for which the contractor alone is responsible for delay as determined by the authority while granting the extension of time.

**ಸಹಿ/- ಕಾರ್ಯಪಾಲಕ ಅಭಿಯಂತರರು,**
**ಲೋಕೋಪಯೋಗಿ ಇಲಾಖೆ, ವಿಭಾಗ, ಗದಗ**
ವಾಸಾಸಂಇ/ಗದಗ/ಎಂ.ಸಿ.ಎ/281/2025-26

**ಹಿಂದೂ ಮಹಾಗಣಪತಿ ಮಂಡಳದಿಂದ ಜಾಗೋ ಹಿಂದುಸ್ತಾನಿ ಸಂಗೀತ ಕಾರ್ಯಕ್ರಮ ಇಂದು**

# ಗಣೇಶ ವಿಸರ್ಜನಾ ಕಾರ್ಯಕ್ರಮ ಸೆ.16ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದೂ ಮಹಾಗಣಪತಿ ಸುದರ್ಶನ ಚಕ್ರ ಯುವ ಮಂಡಳ ವತಿಯಿಂದ ಸೆ. 12ರಂದು ಜಾಗೋ ಹಿಂದುಸ್ತಾನಿ ಸಂಗೀತ ಕಾರ್ಯಕ್ರಮ ಹಾಗೂ ಧರ್ಮಸಭೆ ನಡೆಯಲಿದೆ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಶ್ರೀಕಾಂತ ಖಟವಟೆ ಹೇಳಿದರು.




ಗುರುವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಹಿಂದೂ ಮಹಾಗಣಪತಿ ಮಂಡಳದಿಂದ ನಡೆಯುತ್ತಿರುವ ಗಣೇಶ ಉತ್ಸವವು ವಿಜೃಂಭಣೆಯಿಂದ ಜರುಗುತ್ತಿದ್ದು, ಇತ್ತೀಚೆಗೆ ನಡೆದ ಲಕ್ಷ ದೀಪೋತ್ಸವ ಕಾರ್ಯಕ್ರಮ ಯಶಸ್ವಿಯಾಗಿದೆ. ಗಣಪತಿಯನ್ನು 21 ದಿನಗಳ ಕಾಲ ಪ್ರತಿಷ್ಠಾಪಿಸಲಾಗಿದ್ದು, ಜಿಲ್ಲೆಯ ಜನರೆಲ್ಲರೂ ಆಗಮಿಸಿ ದರ್ಶನ ಪಡೆದಿದ್ದಾರೆ ಎಂದರು.

ಸತತ 21 ದಿನಗಳ ಕಾಲ ಧಾರ್ಮಿಕ, ಸಾಮಾಜಿಕ ಕಾರ್ಯಕ್ರಮಗಳ ಮೂಲಕ ಹಿಂದೂ ಮಹಾಗಣಪತಿ, ಸಾರ್ವಜನಿಕ ಗಣೇಶೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಿದೆ. ಅದರ ಭಾಗವಾಗಿ ಸೆ. 12ರಂದು ಜಾಗೋ ಹಿಂದೂಸ್ತಾನಿ ಸಂಗೀತ ಕಾರ್ಯಕ್ರಮ, ಸೆ. 14ರಂದು ಮಹಾ ಅನ್ನಸಂತರ್ಪಣೆ, ಸೆ. 15ರಂದು ಗಣೇಶನಿಗೆ ಧರಿಸಿರುವ ಆಭರಣಗಳ ಹರಾಜು ಹಾಗೂ ಸೆ. 16ರಂದು ವಿಸರ್ಜನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸುಧೀರ್ ಕಾಟಿಗಾರ, ರವಿರಾಜ ಮಾಳಗೊಂಡ, ಕೀರ್ತಿರಾಜ ಕಾಂಬಳೆಕರ್ ಮತ್ತು ಬಸವರಾಜ ಅನಗವಾಡಿ ಸೇರಿದಂತೆ ಮಂಡಳದ ಇತರ ಸದಸ್ಯರು ಇದ್ದರು.

> ಗದಗ-ಬೆಟಗೇರಿ ಅವಳಿ ನಗರದಲ್ಲಿ ಮುಸ್ಲಿಂ ಸಮಾಜದ ಕೆಲ ಕಿಡಿಗೇಡಿಗಳು ಕಾರಿನ ಮೇಲೆ ಪಾಕಿಸ್ತಾನದ ಧ್ವಜ ಹಾಕಿರುವುದು ಖಂಡನೀಯ. ಅವಳಿ ನಗರ ಹಿಂದಿನಿಂದಲೂ ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಹೆಸರಾಗಿದೆ. ಇಂಥ ನೆಲದಲ್ಲಿ ದೇಶವಿರೋಧಿ ಕೃತ್ಯವನ್ನು ಸಹಿಸುವುದಿಲ್ಲ. ಅಂಥವರಿಗೆ ಕಠಿಣ ಶಿಕ್ಷೆ ಆಗಬೇಕು. ಮುಸ್ಲಿಂ ಸಮಾಜದ ಮುಖಂಡರು ಸಭೆ ಸೇರಿ, ಭವಿಷ್ಯದಲ್ಲಿ ಇಂಥ ಘಟನೆಗಳು ನಡೆಯದಂತೆ ಯುವಕರಿಗೆ ಎಚ್ಚರಿಕೆ ನೀಡಬೇಕು.
>
> **- ಶ್ರೀಕಾಂತ ಖಟವಟೆ.**

# ಅ.19ರಂದು ಮಾಜಿ ಸೈನಿಕರಿಗೆ ಸಂಪರ್ಕ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ರಕ್ಷಣಾ ಇಲಾಖೆಯ ಮರಾಠಾ ಲೈಟ್ ಇನ್‌ಫಂಟ್ರಿ ಸೆಂಟರ್, ಬೆಳಗಾವಿ ಅವರಿಂದ ಬೆಳಗಾವಿ ನಗರದ ಶಿವಾಜಿ ಸ್ಟೇಡಿಯಂನಲ್ಲಿ ದಿನಾಂಕ 19-10-2025ರಂದು ಬೆಳಿಗ್ಗೆ 8.30 ರಿಂದ ಸಂಜೆ 4.00ಗಂಟೆವರೆಗೆ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರಿಗಾಗಿ ಸಂಪರ್ಕ ಸಭೆ ಆಯೋಜಿಸಲಾಗಿರುತ್ತದೆ. ಈ ಶಿಬಿರದಲ್ಲಿ ಮಾಜಿ ಸೈನಿಕರ ನಿವೃತ್ತಿ ಪಿಂಚಣಿ, ಕುಟುಂಬ ಪಿಂಚಣಿಗೆ ಸಂಬಂಧಿಸಿದ ವಿಷಯಗಳ ಕುರಿತು ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಶಿಬಿರದಲ್ಲಿ ಪಾಲ್ಗೊಳ್ಳುವ ಫಲಾನುಭವಿಗಳು ತಮ್ಮ ಕುಂದು ಕೊರತೆ ಕುರಿತು ವಿವರಗಳನ್ನು ನೊಂದಾಯಿಸಿಕೊಂಡು, ನೋಂದಣಿ ಸಂಖ್ಯೆಯನ್ನು ಪಡೆಯಬಹುದಾಗಿರುತ್ತದೆ.

ನೋಂದಣಿ ಮಾಡಿಸುವ ಫಲಾನುಭವಿಗಳು ತಮ್ಮ ಕುಂದು ಕೊರತೆಗಳಿಗೆ ಸಂಭಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584, ದೂರವಾಣಿ ಸಂಖ್ಯೆ 0831-2402821 ಮತ್ತು ಇಮೇಲ್ great-gorilla@nic.inಗಳ ಮೂಲಕ ಅಪ್ಲೋಡ್ ಮಾಡಲು ಅವಕಾಶವಿರುತ್ತದೆ. ಸದರಿ ಶಿಬಿರದಲ್ಲಿ ಧಾರವಾಡ, ಗದಗ, ಹಾವೇರಿ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗೆ ಸಂಬಧಿಸಿದ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು ಶಿಬಿರದಲ್ಲಿ ಪಾಲ್ಗೊಂಡು ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳಬಹುದಾಗಿದೆಯೆದು ಅಭಿಲೇಕಾಧಿಕಾರಿಗಳು ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka